# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 285 | Volume - 01 Issue - 285
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 04–06–2024 ಮಂಗಳವಾರ | Date: 04-06-2024 Tuesday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



ಒಳಪುಟದ ಸುದ್ದಿಗಳು

ಮತ ಚಲಾವಣೆಗೆ ಸರತಿ ಸಾಲಿನಲ್ಲಿ ನಿಂತು ಸುಸ್ತಾದ ಶಿಕ್ಷಕರು 2

ಆಗ್ನೇಯ ಶಿಕ್ಷಕರ ಕ್ಷೇತ್ರ: ಚಳ್ಳಕೆರೆಯಲ್ಲಿ ಶೇ.94.50ರಷ್ಟು ಮತದಾನ 3

ನಾಗೇಂದ್ರ ಪ್ರಕರಣ ಸರ್ಕಾರಕ್ಕೆ ಯಾವುದೇ ತೆಲೆನೋವು ಇಲ್ಲ: ಸುಧಾಕರ್ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಇಂದು ಮತ ಎಣಿಕೆಗೆ ಸಕಲ ಸಿದ್ಧತೆ

» ಚಿತ್ರದುರ್ಗ

ಚಿತ್ರದುರ್ಗ (ಪ.ಜಾತಿ) ಲೋಕಸಭಾ ಕ್ಷೇತ್ರಕ್ಕೆ ನಡೆದ ಚುನಾವಣೆಯ ಮತ ಎಣಿಕೆ ಕಾರ್ಯ ಜೂನ್ 04ರಂದು ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯ ಸರ್ಕಾರಿ ವಿಜ್ಞಾನ ಕಾಲೇಜಿನ ಹೊಸ ಕಟ್ಟಡದಲ್ಲಿ ನಡೆಯಲಿದ್ದು, ಮತ ಎಣಿಕೆ ಕಾರ್ಯಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ನಡೆಸಿದೆ.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕ ಮನೋಹರ್ ಮರಂಡಿ, ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಸಹಾಯಕ ಚುನಾವಣಾಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಡಾ.ನಾಗವೇಣಿ ಅವರು ಸೋಮವಾರ ನಗರದ ಸರ್ಕಾರಿ ವಿಜ್ಞಾನ ಕಾಲೇಜಿಗೆ ಭೇಟಿ ನೀಡಿ ಮತ ಎಣಿಕೆಗೆ ಮಾಡಿರುವ ಸಿದ್ಧತೆಯನ್ನು ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಚಿತ್ರದುರ್ಗ ಲೋಕಸಭಾ ಚುನಾವಣೆಯ ಮತ ಎಣಿಕೆ ಕಾರ್ಯಕ್ಕಾಗಿ ಎಲ್ಲ ಅಗತ್ಯ ಸಿದ್ಧತಾ ಕಾರ್ಯ ಕೈಗೊಳ್ಳಲಾಗಿದ್ದು, ಜೂನ್ 04ರಂದು ಬೆಳಿಗ್ಗೆ 7.30ಕ್ಕೆ ಭದ್ರತಾ ಕೊಠಡಿಗಳನ್ನು ಚುನಾವಣಾ ವೀಕ್ಷಕರ, ಅಭ್ಯರ್ಥಿಗಳ, ಪ್ರತಿನಿಧಿಗಳ ಸಮಕ್ಷಮದಲ್ಲಿ ತೆರೆಯಲಾಗುವುದು. ಎಣಿಕೆ ಕಾರ್ಯವು ಬೆಳಿಗ್ಗೆ 8 ಗಂಟೆಯಿಂದ ಆರಂಭವಾಗಲಿದೆ ಎಂದರು. ಪ್ರತಿ ಕೌಟಿಂಗ್ ಹಾಲ್‌ನಲ್ಲಿ ಪ್ರತಿ ಟೇಬಲ್‌ಗೆ ಸಿ.ಸಿ.ಟಿವಿ ಕ್ಯಾಮೆರಾ ಅವಳಡಿಸಿ





ಮಾನಿಟರಿಂಗ್ ಮಾಡಲಾಗುತ್ತಿದೆ. ಪ್ರತಿ ಸುತ್ತಿನ ಎಣಿಕೆ ಕಾರ್ಯ ಮುಕ್ತಾಯದ ನಂತರ ಚುನಾವಣಾ ವೀಕ್ಷಕರ ಗಮನಕ್ಕೆ ತಂದು ಅಂಕಿ ಅಂಶಗಳ ಕ್ರೂಢೀಕರಣ ಮಾಡಲಾಗುತ್ತದೆ. ಈ ನಿಟ್ಟಿನಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ ಎಂದರು.

ಅಂಚೆ ಮತಪತ್ರಗಳ ಎಣಿಕೆಯ ಜೊತೆಜೊತೆಗೆ ಇವಿಎಂ ಮತ ಎಣಿಕೆ ಕಾರ್ಯವೂ ನಡೆಯಲಿದ್ದು, ಮಧ್ಯಾಹ್ನ 12.30ರ ವೇಳೆಗೆ ಮತ ಎಣಿಕೆಯ ಸ್ಪಷ್ಟ ಚಿತ್ರಣ ದೊರೆಯಲಿದೆ. ಪ್ರತಿ ಟೇಬಲ್‌ಗೆ ಎಣಿಕೆ ಮೈಕ್ರೋ ಅಬಸ್ಸರ್ವರ್, ಎಣಿಕೆ ಮೇಲ್ವಿಚಾರಕರು ಹಾಗೂ ಎಣಿಕೆ ಸಹಾಯಕರನ್ನು ನಿಯೋಜಿಸಲಾಗಿದ್ದು, ಮತ ಎಣಿಕೆ ಕಾರ್ಯಕ್ಕೆ 141 ಎಣಿಕೆ ಮೈಕ್ರೋ ಆಬಸ್ಸರ್ವರ್, 141 ಜನ ಎಣಿಕೆ ಮೇಲ್ವಿಚಾರಕರು ಹಾಗೂ 154 ಜನ ಎಣಿಕೆ ಸಹಾಯಕರನ್ನು ನೇಮಿಸಲಾಗಿದೆ ಎಂದರು.

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 14 ಟೇಬಲ್‌ಗಳನ್ನು ಹಾಗೂ ಅಂಚೆ ಮತಪತ್ರಗಳ ಎಣಿಕೆಗೆ ಒಟ್ಟು 12 ಟೇಬಲ್‌ಗಳನ್ನು ನಿಗಧಿಪಡಿಸಲಾಗಿದೆ. ನೆಲಮಹಡಿಯಲ್ಲಿ ಚಳ್ಳಕೆರೆ, ಹೊಸದುರ್ಗ, ಪಾವಗಡ ಹಾಗೂ ಅಂಚೆಮತ ಪತ್ರಗಳ ಮತ ಎಣಿಕೆ ನಡೆಯಲಿದೆ. ಮೊದಲನೇ ಮಹಡಿಯಲ್ಲಿ ಮೊಳಕಾಲ್ಮುರು, ಹಿರಿಯೂರು ಹಾಗೂ ಶಿರಾ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಹಾಗೂ ಎರಡನೇ ಮಹಡಿಯಲ್ಲಿ ಚಿತ್ರದುರ್ಗ ಹಾಗೂ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಕಾರ್ಯ ನಡೆಯಲಿದೆ ಎಂದು ತಿಳಿಸಿದರು.

ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ 285 ಮತಗಟ್ಟೆಗಳ ಎಣಿಕೆಯು 21 ಸುತ್ತುಗಳಲ್ಲಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದ 260 ಮತಗಟ್ಟೆಗಳ ಎಣಿಕೆಯು 19 ಸುತ್ತುಗಳಲ್ಲಿ, ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ 288 ಮತಗಟ್ಟೆಗಳ ಎಣಿಕೆಯು 21 ಸುತ್ತುಗಳಲ್ಲಿ, ಹಿರಿಯೂರು ವಿಧಾನಸಭಾ ಕ್ಷೇತ್ರದ 287 ಮತಗಟ್ಟೆಗಳ ಎಣಿಕೆಯು 21 ಸುತ್ತುಗಳಲ್ಲಿ, ಹೊಸದುರ್ಗ ವಿಧಾನಸಭಾ ಕ್ಷೇತ್ರದ 242 ಮತಗಟ್ಟೆಗಳ ಎಣಿಕೆಯು 18 ಸುತ್ತುಗಳಲ್ಲಿ, ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದ 299 ಮತಗಟ್ಟೆಗಳ ಎಣಿಕೆಯು 22 ಸುತ್ತುಗಳಲ್ಲಿ, ಶಿರಾ ವಿಧಾನಸಭಾ ಕ್ಷೇತ್ರದ 267 ಮತಗಟ್ಟೆಗಳ ಎಣಿಕೆಯು 20 ಸುತ್ತುಗಳಲ್ಲಿಹಾಗೂಪಾವಗಡವಿಧಾನಸಭಾ ಕ್ಷೇತ್ರದ 240 ಮತಗಟ್ಟೆಗಳ ಎಣಿಕೆಯು 18 ಸುತ್ತುಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಹೇಳಿದರು.

ಮತ ಎಣಿಕೆ ದಿನದಂದು ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಜಿಲ್ಲೆಯಾದ್ಯಂತ 144 ಸೆಕ್ಷನ್ ಜಾರಿಗೊಳಿಸಲಾಗಿದೆ ಹಾಗೂ ಜಿಲ್ಲೆಯಾದ್ಯಂತ ಮದ್ಯಪಾನ ನಿಷೇಧ ಜಾರಿಗೊಳಿಸಲಾಗಿದೆ. ಯಾವುದೇ ಅಭ್ಯರ್ಥಿಗಳು ಸಭೆ, ಸಮಾರಂಭ, ವಿಜಯೋತ್ಸವ ಆಚರಿಸುವಂತಿಲ್ಲ ಎಂದು ತಿಳಿಸಿದರು. ಎಣಿಕೆ ಕೇಂದ್ರದೊಳಗೆ ಮೊಬೈಲ್ ಪೋನ್‌ಗಳು, ಪೇಜರ್, ಎಲೆಕ್ಟ್ರಾನಿಕ್, ಕ್ಯಾಲ್ಕುಲೇಟರ್ಸ್, ಸಿಗರೇಟ್, ಬೀಡಿ, ಬೆಂಕಿಪೊಟ್ಟಣ ಹಾಗೂ ಲೈಟರ್ಸ್‌ಗಳು, ನೀರಿನ ಬಾಟಲ್ಸ್‌ಗಳು ಹಾಗೂ ಇನ್ನೂ ಯಾವುದೇ ಬಾಟಲ್ಸ್‌ಗಳುಯ, ಛತ್ರಿ, ಯಾವುದೇ ಹರಿತವಾದ ಆಯುಧಗಳು, ಯಾವುದೇ ರೀತಿಯ ಸ್ಪೋಟಕ ವಸ್ತುಗಳು ಹಾಗೂ ಸಿಡಿಮದ್ದುಗಳು, ಯಾವುದೇ ರೀತಿಯ ಬೆಂಕಿ ಹತ್ತುವ ಪದಾರ್ಥಗಳು, ಯಾವುದೇ ಬಗೆಯ ಆಯುಧಗಳು, ಇಕ್‌ಪೆನ್ ವಸ್ತುಗಳನ್ನು ತರುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದರು.

## ಫಾಸ್ಟ್ ನ್ಯೂಸ್

### ತೋಟಗಾರಿಕೆ ಬೆಳೆ ವಿಮೆ ನೊಂದಣಿ ಆರಂಭ

» ಚಿತ್ರದುರ್ಗ

ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ 2024–25ನೇ ಸಾಲಿನ ಜಿಲ್ಲೆಯ ತೋಟಗಾರಿಕೆ ಬೆಳಗಳ ಬೆಳೆ ವಿಮೆ ನೊಂದಣಿ ಆರಂಭವಾಗಿದೆ. ಮಳೆಯಾಶ್ರಿತ ಹಾಗೂ ನೀರಾವರಿ ಬೆಳೆಗಳಾದ ಈರುಳ್ಳಿ, ಟೊಮೋಟೊ, ಮೆಣಸಿನಕಾಯಿ ಬೆಳೆಗಳಿಗೆ ರೈತರು ಬೆಳೆ ವಿಮೆ ಮಾಡಿಸಬಹುದು. ಹೊಬಳಿವಾರು ತೋಟಗಾರಿಕೆ ಬೆಳೆಗಳನ್ನು ಅಧಿಸೂಚಿತಗೊಳಿಸಲಾಗಿದೆ. ಟೊಮ್ಯಾಟೋ ಬೆಳೆಗೆ ರೂ.7075, ನೀರಾವರಿ ಆಶ್ರಿತ ಈರುಳ್ಳಿ ಬೆಳೆಗೆ ರೂ.4025, ಮಳೆಯಾಶ್ರಿತ ಈರುಳ್ಳಿ ಬೆಳೆಗೆ ರೂ.3787.50 ಹಾಗೂ ಮಳೆಯಾಶ್ರಿತ ಕೆಂಪು ಮೆಣಸಿನಕಾಯಿ ಬೆಳೆಗೆ ರೂ.3937.50 ರೈತರ ವಿಮಾ ತಂತು ನಿಗದಿ ಮಾಡಲಾಗಿದೆ. ಬೆಳೆ ವಿಮೆ ನೊಂದಣಿಗೆ ಜೂನ್ 31 ಕಡೆಯ ದಿನವಾಗಿದೆ. ನೀರಾವರಿ ಈರುಳ್ಳಿ ಬೆಳೆಗೆ ಜುಲೈ 15 ವರಗೆ ನೊಂದಣಿ ಮಾಡಲು ಅವಕಾಶ ನೀಡಲಾಗಿದೆ. ರೈತರು ಹೆಚ್ಚಿನ ಮಾಹಿತಿಗಾಗಿ ಹತ್ತಿರದ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಕಚೇರಿ ಹಾಗೂ ರೈತ ಸಂಪರ್ಕ ಕೇಂದ್ರಗಳು ಹಾಗೂ ಬ್ಯಾಂಕುಗಳನ್ನು ಸಂಪರ್ಕಿಸಬಹುದು.

### ಲೋಕಸಭಾ ಚುನಾವಣೆ, ಮತ ಎಣಿಕೆಗೆ ಸಕಲ ಸಿದ್ದತೆ; ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರದ ಮತ ಎಣಿಕೆಯು ತೋಳಹುಣಸೆ ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿನ ಶಿವಗಂಗೋತ್ರಿಯಲ್ಲಿ ಜೂನ್ 4 ರ ಬೆಳಗ್ಗೆ 8 ಗಂಟೆಯಿಂದ ನಡೆಯಲಿದ್ದು ಇದಕ್ಕಾಗಿ ಸಕಲ ಸಿದ್ದತೆಗಳು ಪೂರ್ಣಗೊಂಡಿವೆ ಎಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು. ಅವರು ಮಂಗಳವಾರ ಎಣಿಕೆ ಕೇಂದ್ರಕ್ಕೆ ಭೇಟಿ ನೀಡಿ ಎಣಿಕೆ ಕೊಠಡಿಗಳಲ್ಲಿ ಕೈಗೊಂಡ ಸಿದ್ದತೆಗಳನ್ನು ಪರಿಶೀಲಿಸಿ ಮಾತನಾಡಿದರು. ದಾವಣಗೆರೆ ಲೋಕಸಭಾ ಕ್ಷೇತ್ರವು 8 ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದ್ದು ಪ್ರತಿ ಕ್ಷೇತ್ರದಲ್ಲಿ 14 ಟೇಬಲ್‌ಗಳಲ್ಲಿ ಎಣಿಕೆ ನಡೆಯಲಿದ್ದು ಒಂದು ಸುತ್ತಿಗೆ 112 ಮತಗಟ್ಟೆಗಳ ಎಣಿಕೆ ನಡೆಯಲಿದೆ ಎಂದರು. ಕ್ಷೇತ್ರದಲ್ಲಿ 1946 ಮತಗಟ್ಟೆಗಳಿದ್ದು ಕನಿಷ್ಠ 16 ಹಾಗೂ ಗರಿಷ್ಠ 19 ಸುತ್ತುಗಳಲ್ಲಿ ಮತ ಎಣಿಕೆ ನಡೆಯಲಿದೆ. ಪ್ರತಿ ಎಣಿಕೆ ಟೇಬಲ್‌ನಲ್ಲಿ ಎಣಿಕೆ ವೀಕ್ಷಕರು, ಎಣಿಕೆ ಸಹಾಯಕರು, ಮೈಕ್ರೋ ಅಬ್ರರ್‌ವರ್‌ಗಳು ಕಾರ್ಯನಿರ್ವಹಿಸುವರು. ಮತ್ತು ಅಂಚೆ ಮತ ಎಣಿಕೆಗೆ 12 ಟೇಬಲ್‌ಗಳನ್ನು ಹಾಕಲಾಗಿದ್ದು ಸೇವಾ ಮತದಾರರ ಮತ ಎಣಿಕೆಗೆ 1 ಟೇಬಲ್‌ನಲ್ಲಿ ಎಣಿಕೆ ನಡೆಯಲಿದೆ. ಎಣಿಕೆ ಪ್ರಕ್ರಿಯೆಯು ಜೂನ್ 4 ರ ಬೆಳಗ್ಗೆ 6.30 ರಿಂದ ಪ್ರಾರಂಭವಾಗಲಿದ್ದು ಮೊದಲು ಅಂಚೆ ಮತ ಎಣಿಕೆ ಆರಂಭವಾಗಲಿದ್ದು 8 ಗಂಟೆಗೆ ಜೊತೆಯಲ್ಲಿಯೇ ವಿದ್ಯುನ್ಮಾನ ಮತ ಯಂತ್ರದ ಎಣಿಕೆ ಕಾರ್ಯ ಆರಂಭವಾಗಲಿದೆ. ಪ್ರತಿ ಸುತ್ತಿನ ಎಣಿಕೆ ಮುಕ್ತಾಯವಾದ ನಂತರ ಧ್ವನಿವರ್ಧಕದ ಮೂಲಕ ಸಾರ್ವಜನಿಕರಿಗೆ ಫಲಿತಾಂಶ ಪ್ರಚಾರಪಡಿಸಲಾಗುತ್ತದೆ ಎಂದರು.

### ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ಡಿ.ಆರ್.ಆರ್ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ದಾವಣಗೆರೆ ಇಲ್ಲಿ ಪ್ರಥಮ ವರ್ಷದ ಡಿಪ್ಲೋಮಾ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ, ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಶೇ.35 ಅಂಕಗಳನ್ನು ಪಡೆದಿರುವ ಅರ್ಹ ಅಭ್ಯರ್ಥಿಗಳಿಂದ ಆಫ್ ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 4 ಕೊನೆಯದಿನವಾಗಿರುತ್ತದೆ.

# ಆಗ್ನೇಯ ಶಿಕ್ಷಕರ ಕ್ಷೇತ್ರ: ಶೇ.95.83ರಷ್ಟು ಮತದಾನ

» ಚಿತ್ರದುರ್ಗ

ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್‌ಗೆ ಸೋಮವಾರ ನಡೆದ ಚುನಾವಣೆ ಶಾಂತಿಯುತವಾಗಿ ನಡೆದಿದ್ದು, ಚಿತ್ರದುರ್ಗ ಜಿಲ್ಲೆಯಲ್ಲಿ ಶೇ.95.83ರಷ್ಟು ಮತದಾನವಾಗಿದೆ ಎಂದು ಆಗ್ನೇಯ ಶಿಕ್ಷಕರ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 7 ಮತಗಟ್ಟೆ ಸ್ಥಾಪಿಸಲಾಗಿದ್ದು, ಒಟ್ಟು 4913 ಶಿಕ್ಷಕ ಮತದಾರರಲ್ಲಿ 3303 ಪುರುಷರು ಹಾಗೂ 1405 ಮಹಿಳೆಯರು ಸೇರಿ 4708 ಶಿಕ್ಷಕ ಮತದಾರರು ಮತ ಚಲಾಯಿಸಿದ್ದಾರೆ.


ಪುಟ 2




# ಆಗ್ನೇಯ ಶಿಕ್ಷಕರ ಕ್ಷೇತ್ರದಲ್ಲಿ ಶೇ 92.93 ರಷ್ಟು ಮತದಾನ

» ದಾವಣಗೆರೆ

ರಾಜ್ಯ ವಿಧಾನ ಪರಿಷತ್‌ನ ಆಗ್ನೇಯ ಶಿಕ್ಷಕರ ಕ್ಷೇತ್ರ, ನೈರುತ್ಯ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಕ್ಕೆ ಜೂನ್ 3 ರಂದು ನಡೆದ ಮತದಾನದಲ್ಲಿ ದಾವಣಗೆರೆ ಜಿಲ್ಲೆಯಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ಶೇ 92.93, ನೈರುತ್ಯ ಶಿಕ್ಷಕರ ಕ್ಷೇತ್ರಕ್ಕೆ 87.74, ಪದವೀಧರರ ಕ್ಷೇತ್ರಕ್ಕೆ ಶೇ 80.95 ರಷ್ಟು ಮತದಾನವಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ದಾವಣಗೆರೆ, ಹರಿಹರ, ಜಗಳೂರು ತಾಲ್ಲೂಕುಗಳು ಸೇರಲಿದ್ದು ಒಟ್ಟು 7 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು 2795 ಪುರುಷ, 1556 ಮಹಿಳೆ ಸೇರಿ ಒಟ್ಟು 4351 ಮತದಾರರಿಗೆ 4054 ಮತದಾನವಾಗಿ ಶೇ 93.17 ರಷ್ಟು ಮತದಾನವಾಗಿದೆ. ಮತದಾನ ಮಾಡಿದವರಲ್ಲಿ ಪುರುಷ 2608, ಮಹಿಳಾ 1446 ಮತದಾರರಿದ್ದಾರೆ.


ಪುಟ 2


## ಪ್ರಮುಖ ಸುದ್ದಿ

# ಭಾರಿ ಮತದಿಂದ ನನ್ನನ್ನು ಗೆಲ್ಲಿಸುತ್ತಾರೆ: ವೈಎಎನ್

» ಚಿತ್ರದುರ್ಗ

ಕಳೆದ 18 ವರ್ಷದಿಂದ ಶಿಕ್ಷಕರ ಕ್ಷೇತ್ರವನ್ನು ಪ್ರತಿನಿಧಿಸುತ್ತಾ ಶಿಕ್ಷಕರ ಸಮಸ್ಯೆಗಳನ್ನು ಆಲಿಸಿ ಅವುಗಳಿಗೆ ಪರಿಹಾರವನ್ನು ಕಂಡುಕೊಳ್ಳಲಾಗಿದೆ, ಶಿಕ್ಷಕರ ಧ್ವನಿಯಾಗಿರುವ ನನ್ನನ್ನು ಶಿಕ್ಷಕರು ಕಳೆದುಕೊಳ್ಳಲು ಅವರು ಇಷ್ಟ ಪಡುವುದಿಲ್ಲ ಈ ಭಾರಿಯ ಚುನಾವಣೆಯಲ್ಲಿ ಶಿಕ್ಷಕ ಮತದಾರರು ನನ್ನನ್ನು ಗೆಲ್ಲಿಸುತ್ತಾರೆ ಎಂದು ಆಗ್ನೇಯ ಶಿಕ್ಷಕರ ಕ್ಷೇತ್ರದ ಎನ್‌ಡಿಎ ಮೈತ್ರಿ ಕೂಟದ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ನಡೆಯುತ್ತಿರುವ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಹಿನ್ನಲೆಯಲ್ಲಿ ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಕಳೆದ 18 ವರ್ಷ ಶಿಕ್ಷಕರ ಸೇವೆಯನ್ನು ಮಾಡಿದ್ದೇನೆ, ಅವರ ವಿವಿಧ ರೀತಿಯ ಸಮಸ್ಯೆಗಳಿಗೆ ಸ್ಪಂದಿಸಿದ್ದೇನೆ, ಅಲ್ಲದೆ ಸ್ವಾತಂತ್ರ್ಯ ಬಂದಾಗಿನಿಂದಲೂ ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವನ್ನು ಸಾಧಿಸಿಲ್ಲ, ಬಿಜೆಪಿ ಮತ್ತು ಜೆಡಿಎಸ್ ಅಭ್ಯರ್ಥಿಗಳು ಗೆಲುವನ್ನು ಸಾಧಿಸಿದ್ದಾರೆ, ಈ ಹಿನ್ನಲೆಯಲ್ಲಿ ಈ ಬಾರಿಯೂ ಸಹಾ ಈ ಕ್ಷೇತ್ರ ಎನ್,ಡಿ.ಎ.ಮೈತ್ರಿ ಕೂಟದ ಅಭ್ಯರ್ಥಿಯ ಪಾಲಾಗಲಿದೆ. ಕಳೆದ ಮೂರು ಚುನಾವಣೆಗಿಂತಲೂ ಈ ಚುನಾವಣೆಯಲ್ಲಿ ಅಧಿಕ ಮತಗಳಿಂದ ಮತದಾರರು ನನ್ನನ್ನು ಜಯಶಾಲಿಯನ್ನಾಗಿಸುತ್ತಾರೆ ಎಂದು ಭವಿಷ್ಯ ನುಡಿದರು.ಕೇಂದ್ರ ಸರ್ಕಾರ ದೇಶದಲ್ಲಿ ಎನ್.ಇ.ಪಿ.ಯನ್ನು ಜಾರಿ ಮಾಡಲು ಹೊರಟಿದೆ ಇದರಿಂದ ಈಗ ಅಲ್ಲದಿದ್ದರೂ ನಮ್ಮ ಮುಂದಿನ ಪೀಳೀಗೆಗೆ ಇದರ ಪ್ರಯೋಜನ ದೊರಕಲಿದೆ.





ಅದರೆ ರಾಜ್ಯ ಸರ್ಕಾರ ಇದನ್ನು ವಿರೋಧಿಸುತ್ತಿದೆ, ಇದರ ಬದಲಿಗೆ ಎಸ್.ಇ.ಪಿ.ಯನ್ನು ಜಾರಿ ಮಾಡಲು ಮುಂದಾಗಿದ್ದು ಕಾಂಗ್ರೆಸ್ ಸರ್ಕಾರ ತಪ್ಪು ನಿರ್ಧಾರಗಳನ್ನು ತೆಗೆದುಕೊಂಡು ಕಾನೂನುಗಳನ್ನು ಮಾಡಿ ಪರಿಷತ್‌ಗೆ ಕಳುಹಿಸುತ್ತಾರೆ ಇಲ್ಲಿ ನಮ್ಮ ಬಿಜೆಪಿಯ ಸಂಖ್ಯೆ ಹೆಚ್ಚಾಗಿದ್ದರೆ ಅದು ಸರಿಯಾಗಿ ಇದ್ದರೆ ಪಾಸು ಮಾಡಬಹುದು ಆದರೆ ಕೆಲವೊಮ್ಮೆ ತಪ್ಪು ನಿರ್ಧಾರಗಳನ್ನು ತೆಗೆದುಕೊಂಡಾಗ ಅದನ್ನು ತಿರಸ್ಕರಿಸಬಹುದು ಇದಕ್ಕೆ ನಮ್ಮ ಸಂಖ್ಯಾ ಬಲ ಹೆಚ್ಚಾಗಿರಬೇಕಿದೆ ಇದರ ಬದಲು ಕಾಂಗ್ರೆಸ್ ಪಕ್ಷದ ಬಳ ಹೆಚ್ಚಾಗಿದ್ದರೆ ಅದು ಪಾಸಾಗುತ್ತದೆ ಇದರಿಂದ ಮುಂದೆ ಮಕ್ಕಳು ಮತ್ತ ಶಿಕ್ಷಕರಿಗೆ ತೊಂದರೆಯಾಗುತ್ತಿದೆ ಈ ಹಿನ್ನಲೆಯಲ್ಲಿ ನಿಮ್ಮ ಸಹಾಯ ಅಗತ್ಯವಿದೆ ಎಂದರು.

ಮಾಜಿ ಸಚಿವ ಗೋವಿಂದ ಕಾರಜೋಳ ಮಾತನಾಡಿ, ಈ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಮತದಾರರು ನಮ್ಮ ಕೈ ಹಿಡಿಯುತ್ತಾರೆ ಎಂಬ ನಂಬಿಕೆ ಇದೆ ಅಲ್ಲದೆ ನಾರಾಯಣಸ್ವಾಮಿಯವರು ಸಹ ಕಳೆದ 18 ವರ್ಷದಿಂದ ಈ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದು ಶಿಕ್ಷಕರ ಸಮಸ್ಯೆಗಳ ಬಗ್ಗೆ ಅವರಿಗೆ ಅರಿವು ಇದೆ. ಈ ಹಿನ್ನಲೆಯಲ್ಲಿ ಅವರನ್ನು ಗೆಲ್ಲಿಸಿದರೆ ಮುಂದೆ ಶಿಕ್ಷಕರಿಗೆ ಅನುಕೂಲವಾಗಲಿದೆ ಎಂದರು.

ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ, ಎಸ್.ಸಿ.ಮೋರ್ಚಾದ ರಾಜ್ಯ ಕಾರ್ಯದರ್ಶಿ ಉಮೇಶ್ ಕಾರಜೋಳ, ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ಶೈಲಜ ರೆಡ್ಡಿ, ವಕ್ತಾರರಾದ ನಾಗರಾಜ್ ಬೇದ್ರೇ, ದಗ್ಗೆ ಶಿವಪ್ರಕಾಶ್ ನಗರಾಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ, ಮಂಜುಳಮ್ಮ, ಬಸಮ್ಮ, ಅರುಣ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಕಾಂಗ್ರೆಸ್ ಮತ್ತು ಬಿಜೆಪಿ. ಯವರು ಪರಸ್ಪರ ತಮ್ಮ ನಾಯಕರುಗಳ ಪರ ಜೈಕಾರ

» ಚಿತ್ರದುರ್ಗ

ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ. ಕಾರ್ಯಕರ್ತರು ಪಕ್ಕ ಪಕ್ಕದಲಿಯೇ ನಿಂತು ಪರಸ್ಪರ ಜೈಕಾರಗಳನ್ನು ಕೂಗುತ್ತಿದ್ದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಬಂದ ತಕ್ಷಣ ಕಾಂಗ್ರೆಸ್ ಕಾರ್ಯಕರ್ತರು ರಾಹುಲ್‌ಗಾಂಧಿಗೆ ಜೈ ಎಂದು ಕೂಗಿದರೆ. ಬಿಜೆಪಿ.ಯವರು ಮತ್ತೊಮ್ಮೆ ಮೋದಿ ಎಂದು ಜಯಘೋಷಗಳನ್ನು ಕೂಗಿತ್ತಿದ್ದರು. ಎರಡು ಪಕ್ಷದವರು ಪೈಪೋಟಿ ಮೇಲೆ ಜೈಕಾರಗಳನ್ನು ಹಾಕುತ್ತಿದ್ದರು. ಬಿಜೆಪಿ. ಕಾಂಗ್ರೆಸ್ ಕಾರ್ಯಕರ್ತರು ಮಿಕ್ಸ್ ಆಗಿ ತಮ್ಮ ತಮ್ಮ ಪಕ್ಷಗಳ ನಾಯಕರುಗಳ ಪರ ಜೈಕಾರಗಳನ್ನು ಕೂಗುತ್ತಿದ್ದುದು, ನೋಡುಗರಿಗೆ ಒಂದು ರೀತಿಯ ಮನರಂಜನೆ ನೀಡುವಂತಿತ್ತು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿಗಳಾದ ಡಿ.ಎನ್.ಮೈಲಾರಪ್ಪ, ಕೆ.ಪಿ.ಸಂಪತ್‌ಕುಮಾರ್, ಉಪಾಧ್ಯಕ್ಷರುಗಳಾದ ಎಸ್.ಎನ್.ರವಿಕುಮಾರ್, ನಜ್ಮತಾಜ್, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷರುಗಳಾದ ಆರ್.ಕೆ.ಸರ್ದಾರ್, ಬಿ.ಟಿ.ಜಗದೀಶ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತ ನಂದಿನಿಗೌಡ, ಪದವೀಧರ ವಿಭಾಗದ ಅಧ್ಯಕ್ಷ ಮುದಸಿರ್ ನವಾಜ್, ಕೆ.ಪಿ.ಸಿ.ಸಿ.ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಮುನಿರಾ ಎ.ಮಕಾಂದಾರ್, ಮೋಕ್ಷರುದ್ರಸ್ವಾಮಿ, ಕೆಡಿಪಿ. ಸದಸ್ಯ ಕೆ.ಸಿ.ನಾಗರಾಜ್, ಎಸ್ಸಿ. ವಿಭಾಗದ ಜಿಲ್ಲಾಧ್ಯಕ್ಷ ಜಯಣ್ಣ, ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್‌ಬೇದ್ರೆ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಶೈಲಜಾರೆಡ್ಡಿ, ಬಸಮ್ಮ, ಕಾಂಚನ ಇನ್ನು ಅನೇಕರು ಜಮಾಯಿಸಿ ತಮ್ಮ ತಮ್ಮ ಅಭ್ಯರ್ಥಿಗಳ ಪರ ಶಿಕ್ಷಕರುಗಳಲ್ಲಿ ಮತಯಾಚಿಸಿದರು.

### ಮತ ಎಣಿಕೆ, ಸಂಚಾರ ಮಾರ್ಗ ಬದಲಾವಣೆ

» ದಾವಣಗೆರೆ

ಲೋಕಸಭಾ ಚುನಾವಣೆ ಮತ ಎಣಿಕೆಯು ದಾವಣಗೆರೆ ವಿಶ್ವವಿದ್ಯಾನಿಲಯ ಶಿವಗಂಗೋತ್ರಿಯಲ್ಲಿ ಜೂನ್ 4 ರಂದು ಎಣಿಕೆ ನಡೆಯುವುದರಿಂದ ಸಾರ್ವಜನಿಕರ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಮತ್ತು ಮತ ಎಣಿಕೆ ಕಾರ್ಯ ಸುಗಮವಾಗಿ ನಡೆಯುವ ಸಲುವಾಗಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿ ಬೆಳಿಗ್ಗೆ 6.00ಗಂಟೆ ಯಿಂದ ಸಂಜೆ 6.00 ಗಂಟೆ ವರೆಗೆ ಮತ ಎಣಿಕೆ ಕೇಂದ್ರದ ಮುಂದೆ ಹಾದು ಹೋಗುವ ಬೀರೂರು-ಸಮ್ಮಸಗಿ ರಸ್ತೆಯಲ್ಲಿ ವಾಹನಗಳ ಸಂಚಾರ ನಿಷೇಧಿಸಿ, ಬದಲಿ ಮಾರ್ಗದಲ್ಲಿ ಸಂಚರಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಡಾ.ವೆಂಕಟೇಶ್ ಎಂ.ವಿ. ಆದೇಶಿಸಿದ್ದಾರೆ.

ವಾಹನ ಸಂಚಾರ ಮಾರ್ಗ ; ದಾವಣಗೆರೆ ಯಿಂದ ಸಂತೆಬೆನ್ನೂರು, ಚನ್ನಗಿರಿಗೆ ಹೋಗುವ ವಾಹನ ಸವಾರರು ಶಿರಮಗೊಂಡನಹಳ್ಳಿ, ಹದಡಿ ಮೂಲಕ ಚನ್ನಗಿರಿ ಕಡೆಗೆ ಹೋಗುವುದು.

ಚನ್ನಗಿರಿ ಕಡೆಯಿಂದ ಸಂತೆಬೆನ್ನೂರು ಮಾರ್ಗವಾಗಿ ದಾವಣಗೆರೆ ಕಡೆಗೆ ಬರುವವರು ಕುರ್ಕಿಯ ಹತ್ತಿರ ಎಡ ತಿರುವು ತೆಗೆದುಕೊಂಡು ಹದಡಿ ಗ್ರಾಮದಿಂದ ದಾವಣಗೆರೆ ಕಡೆಗೆ ಬರುವುದು ಹಾಗೂ ಚಿತ್ರದುರ್ಗ ಕಡೆಗೆ ಹೋಗುವವರು ಕುರ್ಕಿ ಗ್ರಾಮದ ಹತ್ತಿರ ಬಲ ತಿರುವು ತೆಗೆದುಕೊಂಡು ಆನಗೋಡು ಮುಖಾಂತರ ಚಿತ್ರದುರ್ಗ, ಬೆಂಗಳೂರು ಕಡೆಗೆ ಹೋಗಬೇಕು ಎಂದು ತಿಳಿಸಿದ್ದಾರೆ.

### ಮಹಿಳೆ ಕಾಣೆ

» ದಾವಣಗೆರೆ

ಮಲೇಬೆನ್ನೂರು ಪೊಲೀಸ್ ಠಾಣೆಯ ವ್ಯಾಪ್ತಿಯ ಮಲೇಬೆನ್ನೂರು ಪಟ್ಟಣದ ರೇಣುಕಮ್ಮ ಕೊಂ ನಾಗರಾಜ 45 ವರ್ಷ, ಮಡಿವಾಳ ಜನಾಂಗದವರು ಇವರು ಕಳೆದ ಮೇ.30 ರಂದು ಸಂಜೆ 5.30ಕ್ಕೆ ಮನೆಯಿಂದ ಹೋದವರು ಇದೂವರೆಗೂ ಮನೆಗೆ ವಾಪಾಸ್ ಬಂದಿರುವುದಿಲ್ಲ. ಚಹರೆ ವಿವರ ಇಂತಿದೆ. ಸಾಧಾರಣ ಮೈಕಟ್ಟು, 05 ಅಡಿ 3 ಇಂಚು ಎತ್ತರ, ಕೋಲು ಮುಖ, ಕಪ್ಪು ಮೈಬಣ್ಣ, ಕೆಂಪುಮಿಶ್ರಿತ ನೀಲಿ ಬಣ್ಣದ ಸೀರೆ ಧರಿಸಿರುತ್ತಾರೆ ಎಂದು ಮಲೇಬೆನ್ನೂರು ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ

» ದಾವಣಗೆರೆ

ಮಲೇಬೆನ್ನೂರು ಪೊಲೀಸ್ ಠಾಣೆ ವ್ಯಾಪ್ತಿಯ ಕುಣೇಬೆಳಕೆರೆ ಗ್ರಾಮದ ರವಿ ತಂದೆ ಹನುಮಂತಪ್ಪ 40 ವರ್ಷ, ಭೋವಿ ಜನಾಂಗದವರು ಇವರು ಕಳೆದ 2023 ರ ಆಗಸ್ಟ್ 1 ರ ಬೆಳಿಗ್ಗೆ 4 ಗಂಟೆಗೆ ಸ್ನೇಹಿತನನ್ನು ಕರೆದುಕೊಂಡು ಬರುತ್ತೇನೆ ಎಂದು ಮನೆಯಿಂದ ಹೋದವರು ಇದೂವರೆಗೂ ಮನೆಗೆ ವಾಪಾಸ್ ಬಂದಿರುವುದಿಲ್ಲ. ಚಹರೆ ವಿವರ ಇಂತಿದೆ. ಸದೃಡವಾದ ಮೈಕಟ್ಟು, 05 ಅಡಿ 8 ಇಂಚು ಎತ್ತರ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ಪಿಂಕ್ ಕಲರ್ ಶರ್ಟ್, ನೀಲಿ & ಕಪ್ಪು ಬಣ್ಣದ ಚೌಕಳಿಯುಳ್ಳ ಪಂಚೆಯನ್ನು ಧರಿಸಿರುತ್ತಾರೆ ಎಂದು ಮಲೇಬೆನ್ನೂರು ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

# ಆಗ್ನೇಯ ಕ್ಷೇತ್ರ: ಶೇ.95.83ರಷ್ಟು ಮತದಾನ

» ಮೊದಲ ಪುಟದಿಂದ

**ಮತಗಟ್ಟೆವಾರು ಮತದಾನದ ವಿವರ:** ಮೊಳಕಾಲ್ಮುರು ತಾಲ್ಲೂಕಿನ ತಾಲ್ಲೂಕು ಆಡಳಿತ ಸೌಧದ ಮತಗಟ್ಟೆಯಲ್ಲಿ 222 ಪುರುಷರು ಹಾಗೂ 46 ಮಹಿಳಾ ಮತದಾರರು ಸೇರಿದಂತೆ ಒಟ್ಟು 268 ಶಿಕ್ಷಕ ಮತದಾರರು ಇದ್ದು, ಇದರಲ್ಲಿ 214 ಪುರುಷರು 44 ಮಹಿಳೆಯರು ಸೇರಿ ಒಟ್ಟು 258 ಶಿಕ್ಷಕ ಮತದಾರರು ಮತ ಚಲಾಯಿಸಿದ್ದು, ಶೇ.96.27ರಷ್ಟು ಮತದಾನವಾಗಿದೆ.

ಚಳ್ಳಕೆರೆ ನಗರದ ಬಿಎಂಜಿಹೆಚ್‌ಎಸ್ ಶಾಲೆಯ ಮತಗಟ್ಟೆಯಲ್ಲಿ 754 ಪುರುಷರು ಹಾಗೂ 265 ಮಹಿಳಾ ಮತದಾರರು ಸೇರಿದಂತೆ ಒಟ್ಟು 1019 ಶಿಕ್ಷಕ ಮತದಾರರು ಇದ್ದು, ಇದರಲ್ಲಿ 710 ಪುರುಷರು 253 ಮಹಿಳೆಯರು ಸೇರಿ ಒಟ್ಟು 963 ಶಿಕ್ಷಕ ಮತದಾರರು ಮತ ಚಲಾಯಿಸಿದ್ದು, ಶೇ.94.50ರಷ್ಟು ಮತದಾನವಾಗಿದೆ.

ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನ ಕೊಠಡಿ ಸಂಖ್ಯೆ-1ರ ಮತಗಟ್ಟೆಯಲ್ಲಿ 489 ಪುರುಷರು ಹಾಗೂ 292 ಮಹಿಳಾ ಮತದಾರರು ಸೇರಿದಂತೆ ಒಟ್ಟು 781 ಶಿಕ್ಷಕ ಮತದಾರರು ಇದ್ದು, ಇದರಲ್ಲಿ 462 ಪುರುಷರು 288 ಮಹಿಳೆಯರು ಸೇರಿ ಒಟ್ಟು 750 ಶಿಕ್ಷಕ ಮತದಾರರು ಮತ ಚಲಾಯಿಸಿದ್ದು, ಶೇ.96.03ರಷ್ಟು ಮತದಾನವಾಗಿದೆ.





### ಆಗ್ನೇಯ ಶಿಕ್ಷಕರ ಕ್ಷೇತ್ರದಲ್ಲಿ ಶೇ 92.93 ರಷ್ಟು ಮತದಾನ

» ಮೊದಲ ಪುಟದಿಂದ

ನೈರುತ್ಯ ಶಿಕ್ಷಕರ ಕ್ಷೇತ್ರವು ಜಿಲ್ಲೆಯ ಹೊನ್ನಾಳಿ, ನ್ಯಾಮತಿ, ಚನ್ನಗಿರಿ ತಾಲ್ಲೂಕುಗಳು ಸೇರಲಿದ್ದು 979 ಒಟ್ಟು ಮತದಾರರು, 4 ಮತಗಟ್ಟೆಗಳಲ್ಲಿ ಮತದಾನ ನಡೆದಿದ್ದು 648 ಪುರುಷ, 211 ಮಹಿಳೆಯರು ಮತದಾನ ಮಾಡಿದ್ದು ಒಟ್ಟು 859 ಮತದಾನ ಮಾಡಿ ಶೇ 87.74 ರಷ್ಟು ಮತದಾನವಾಗಿದೆ. ನೈರುತ್ಯ ಪದವೀಧರರ ಕ್ಷೇತ್ರದ ವ್ಯಾಪ್ತಿಗೆ ಹೊನ್ನಾಳಿ, ನ್ಯಾಮತಿ, ಚನ್ನಗಿರಿ ತಾಲ್ಲೂಕುಗಳು ಸೇರಿದ್ದು 4288 ಪುರುಷ, 2270 ಮಹಿಳೆಯರು ಸೇರಿ ಒಟ್ಟು 6558 ಮತದಾರರಲ್ಲಿ 8 ಮತಗಟ್ಟೆಗಳಿಂದ 3545 ಪುರುಷ, 1764 ಮಹಿಳೆಯರು ಸೇರಿ ಒಟ್ಟು 5309 ಮತ ಚಲಾಯಿಸಿ ಶೇ 80.95 ರಷ್ಟು ಮತದಾನವಾಗಿದೆ. ಮತ ಎಣಿಕೆಯು ಜೂನ್ 6 ರಂದು ಬೆಂಗಳೂರು ಮತ್ತು ಮೈಸೂರಿನಲ್ಲಿ ನಡೆಯಲಿದೆ ಎಂದು ಅವರು ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನ ಕೊಠಡಿ ಸಂಖ್ಯೆ-2ರ ಮತಗಟ್ಟೆಯಲ್ಲಿ 501 ಪುರುಷರು ಹಾಗೂ 322 ಮಹಿಳಾ ಮತದಾರರು ಸೇರಿದಂತೆ ಒಟ್ಟು 823 ಶಿಕ್ಷಕ ಮತದಾರರು ಇದ್ದು, ಇದರಲ್ಲಿ 485 ಪುರುಷರು 295 ಮಹಿಳೆಯರು ಸೇರಿ ಒಟ್ಟು 780 ಶಿಕ್ಷಕ ಮತದಾರರು ಮತ ಚಲಾಯಿಸಿದ್ದು, ಶೇ.94.78ರಷ್ಟು ಮತದಾನವಾಗಿದೆ.



ಹಿರಿಯೂರು ತಾಲ್ಲೂಕಿನ ತಾಲ್ಲೂಕು ಆಡಳತ ಸೌಧದ ಮತಗಟ್ಟೆಯಲ್ಲಿ 601 ಪುರುಷರು ಹಾಗೂ 264 ಮಹಿಳಾ ಮತದಾರರು ಸೇರಿದಂತೆ ಒಟ್ಟು 865 ಶಿಕ್ಷಕ ಮತದಾರರು ಇದ್ದು, ಇದರಲ್ಲಿ 589 ಪುರುಷರು 258 ಮಹಿಳೆಯರು ಸೇರಿ ಒಟ್ಟು 847 ಶಿಕ್ಷಕ ಮತದಾರರು ಮತ ಚಲಾಯಿಸಿದ್ದು, ಶೇ.92ರಷ್ಟು ಮತದಾನವಾಗಿದೆ.

ಹೊಸದುರ್ಗ ತಾಲ್ಲೂಕಿನ ತಾಲ್ಲೂಕು ಕಚೇರಿ ಸಭಾಂಗಣದ ಮತಗಟ್ಟೆಯಲ್ಲಿ 508 ಪುರುಷರು ಹಾಗೂ 172 ಮಹಿಳಾ ಮತದಾರರು ಸೇರಿದಂತೆ ಒಟ್ಟು 680 ಶಿಕ್ಷಕ ಮತದಾರರು ಇದ್ದು, ಇದರಲ್ಲಿ 492 ಪುರುಷರು 162 ಮಹಿಳೆಯರು ಸೇರಿ ಒಟ್ಟು 654 ಶಿಕ್ಷಕ ಮತದಾರರು ಮತ ಚಲಾಯಿಸಿದ್ದು, ಶೇ.96.18ರಷ್ಟು ಮತದಾನವಾಗಿದೆ.

ಹೊಳಲ್ಕೆರೆಯ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಮತ್ತು ಉರ್ದು ಶಾಲೆಯ ಮತಗಟ್ಟೆಯಲ್ಲಿ 367 ಪುರುಷರು ಹಾಗೂ 110 ಮಹಿಳಾ ಮತದಾರರು ಸೇರಿದಂತೆ ಒಟ್ಟು 477 ಶಿಕ್ಷಕ ಮತದಾರರು ಇದ್ದು, ಇದರಲ್ಲಿ 351 ಪುರುಷರು 105 ಮಹಿಳೆಯರು ಸೇರಿ ಒಟ್ಟು 456 ಶಿಕ್ಷಕ ಮತದಾರರು ಮತ ಚಲಾಯಿಸಿದ್ದು, ಶೇ.95.60ರಷ್ಟು ಮತದಾನವಾಗಿದೆ ಎಂದು ಆಗ್ನೇಯ ಶಿಕ್ಷಕರ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

# ಆಗ್ನೇಯ ಶಿಕ್ಷಕರ ಕ್ಷೇತ್ರ: ಈ ಬಾರಿಯೂ ಗೆಲುವು ನನ್ನದೆ : ವೈ.ಎ.ನಾರಾಯಣಸ್ವಾಮಿ

» ಚಳ್ಳಕೆರೆ

ಆಗ್ನೇಯ ಶಿಕ್ಷಕರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ಇಲ್ಲಿನ ಬಿಎಂಜಿಎಚ್‌ಎಸ್ ಸರ್ಕಾರಿ ಪ್ರೌಢಶಾಲೆ ಮತಗಟ್ಟೆಗೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಶೇ.50ರಷ್ಟು ಮತದಾನವಾಗಿದ್ದು, ಶಿಕ್ಷಕರು ಉತ್ಸಾಹದಿಂದ ಮತಚಲಾವಣೆ ಮಾಡುತ್ತಿದ್ದು, ಈಗಾಗಲೇ ನಾನು ಆಗ್ನೇಯ ಶಿಕ್ಷಕರ ಕ್ಷೇತ್ರದಲ್ಲಿ ಬೆಳಗಿನಿಂದಲೇ ವಿವಿಧ ಮತಗಟ್ಟೆಗೆ ಭೇಟಿ ನೀಡಿದ್ದೇನೆ ಶಿಕ್ಷಕರ ಉತ್ಸಾಹ ನೋಡಿದರೆ ಈ ಬಾರಿಯೂ ನಾನು ಈ ಚುನಾವಣೆಯಲ್ಲಿ ನಾಲ್ಕನೇ ಬಾರಿಗೆ ಗೆಲುವು ಸಾಧಿಸುವ ಆತ್ಮವಿಶ್ವಾಸ ಹೆಚ್ಚಾಗಿದೆ ಎಂದರು.

ಕೋಲಾರ ಮತ್ತು ತುಮಕೂರು ಜಿಲ್ಲೆಗೆ ಭೇಟಿ ನೀಡಿ ಚಿತ್ರದುರ್ಗ ಜಿಲ್ಲೆಗೆ ಆಗಮಿಸಿದ್ದೇನೆ. ಆ ಭಾಗದಲ್ಲಿ ಬೆಳಗಿನಿಂದಲೇ ಮತದಾನ ಬಿರುಸುಗೊಂಡಿದೆ. ಈ ಬಾರಿ ಚುನಾವಣೆಯಲ್ಲಿ ಹೆಚ್ಚು ಅಭ್ಯರ್ಥಿಗಳು ಸ್ಪರ್ಧೆಯಲ್ಲಿರುವುದು ನನಗೆ ಜಯಗಳಿಸಲು ಅನುಕೂಲವಾಗಲಿದೆ. ಕಳೆದ ಮೂರು ಅವಧಿಯಲ್ಲಿಯೂ ನಾನು ಈ ಕ್ಷೇತ್ರದಿಂದ ವಿಧಾನಪರಿಷತ್‌ಗೆ ಆಯ್ಕೆಯಾಗಿದ್ದು, ಶಿಕ್ಷಕರ ಎಲ್ಲಾ ಸಮಸ್ಯೆಗಳ ಬಗ್ಗೆ ವಿಧಾನಪರಿಷತ್‌ನಲ್ಲಿ ಹೋರಾಟ ನಡೆಸಿದ್ದೇನೆ. ಪ್ರತಿಯೊಬ್ಬ ಶಿಕ್ಷಕರನೂ ಸರ್ಕಾರದ ಮಟ್ಟದಲ್ಲಿ ತನ್ನ ಕೆಲಸ ಏನೇ ಇದ್ದರೂ ಅದನ್ನು ಮಾಡಿಸಿಕೊಳ್ಳಬೇಕೆಂಬ ಬಯಕೆ ಅವರದ್ದಾಗಿದೆ. ಆದ್ದರಿಂದ ಬಹುತೇಕ ಎಲ್ಲಾ ಶಿಕ್ಷಕರು ಯಾವುದೇ ಕೆಲಸ ಕಾರ್ಯವಿದ್ದರೂ ನೇರವಾಗಿ ಬೆಂಗಳೂರಿಗೆ ಆಗಮಿಸಿ ನನ್ನನ್ನು ಭೇಟಿ ಮಾಡುತ್ತಿದ್ದರು. ನಿರಂತರವಾಗಿ ಶಿಕ್ಷಕರ ಸಮಸ್ಯೆಗೆ ನಾನು ಸ್ಪಂದಿಸಿದ್ದು, ಇದು ಶಿಕ್ಷಕರ ಸಮೂಹಕ್ಕೂ ಸಹ ಮಾಹಿತಿ ಇದೆ, ಅದ್ದರಿಂದ ಈ ಕ್ಷೇತ್ರದಿಂದ ಮತ್ತೊಮ್ಮೆ ಗೆಲುವು ಸಾಧಿಸಿ ಸಮಸ್ಯೆಗಳ ನಿವಾರಣೆಗೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದರು. ಜಿಲ್ಲಾ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಮಂಡಲಾಧ್ಯಕ್ಷ ಸೂರನಹಳ್ಳಿಶ್ರೀನಿವಾಸ್, ಈ.ರಾಮರೆಡ್ಡಿ, ದೇವರಾಜ್, ಟಿ.ಮಂಜುನಾಥ, ಜಿ.ಬಾಲರೆಡ್ಡಿ, ಶಾಂತಕುಮಾರ್ ಉಪಸ್ಥಿತರಿದ್ದರು.





ಚಳ್ಳಕೆರೆ ನಗರದ ಡಿ.ವೀರಣ್ಣ ಲೇಔಟ್‌ನಲ್ಲಿ ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಟಿ.ತಿಪ್ಪೇಸ್ವಾಮಿಯವರ ಹುಟ್ಟುಹಬ್ಬದ ಅಂಗವಾಗಿ ಅಭಿಮಾನಿಗಳು, ಕಾರ್ಯಕರ್ತರು ಕೇಕ್ ಕತ್ತರಿಸುವ ಮೂಲಕ ಆಚರಿಸಿದರು. ನೇತಾಜಿ ಪ್ರಸನ್ನ, ಬಿ.ಫರೀದ್‌ಖಾನ್, ಚೇತನ್‌ಕುಮಾರ್, ಪ್ರಶಾಂತ್‌ಕುಮಾರ್, ಸೈಪುಲ್ಲಾ, ಲಕ್ಷ್ಮಣ್‌ಪಾಳೇಗಾರ ಇದ್ದರು.

### ಮಕ್ಕಳಿಗೆ ಭಾರತೀಯ ಸಂಸ್ಕೃತಿ ಕಲಿಸಬೇಕಾಗಿದೆ: ಎಲ್‌ಹೆಚ್‌ಎ



» ದಾವಣಗೆರೆ

ಇಂದಿನ ಮಕ್ಕಳಲ್ಲಿ ಭಾರತೀಯ ಸಂಸ್ಕೃತಿ ಹಾಗೂ ಆದರ್ಶ ಗುಣಗಳನ್ನು ಬೆಳೆಸುವ ಮೂಲಕ ಅವರನ್ನು ಸಮಾಜದ ಉತ್ತಮ ಆಸ್ತಿಯನ್ನಾಗಿ ಮಾಡಬೇಕಾಗಿದೆ ಎಂದು ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಕರೆ ನೀಡಿದರು. ನಗರದ ಮಾಂಟೆಸೋರಿ ಕಾನ್ವೆಂಟ್ ಶಾಲೆಯ 2024-25ನೇ ಸಾಲಿನ ಶಾಲಾ ಆರಂಭೋತ್ಸವ ಕಾರ್ಯಕ್ರಮವನ್ನು ಟೇಪ್ ಕತ್ತರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಮಕ್ಕಳಲ್ಲಿ ಶಿಸ್ತು, ಪ್ರಾಮಾಣಿಕತೆ, ಮೃಧು ಮಾತು, ಮತ್ತು ಭಾಷಾಜ್ಞಾನ ಕಲಿಸುವುದು ಅವಶ್ಯಕವಾಗಿದ್ದು, ಆ ನಿಟ್ಟಿನಲ್ಲಿ ಮಾಂಟೆಸೋರಿ ವಿದ್ಯಾಸಂಸ್ಥೆ ಉತ್ತಮ ಶಿಕ್ಷಣ ನೀಡುತ್ತಿದೆ ಎಂದರು. ಬೆಳೆಯುವ ಸಿರಿ ಮೊಳಕೆಯಲ್ಲೇ ಎನ್ನುವಂತೆ ಉತ್ತಮ ಶಿಕ್ಷಣದೊಂದಿಗೆ ಸಂಸ್ಕೃತಿಯನ್ನು ಕಲಿಸಿ, ಮಕ್ಕಳನ್ನು ದೇಶದ ಉತ್ತಮ ಪ್ರಜೆಗಳನ್ನಾಗಿ ರೂಪಿಸುವಲ್ಲಿ 25 ವರ್ಷಗಳಿಮದ ಮನ್ನಡೆಯುತ್ತಿದೆ. ಈ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆದು ದೇಶದ ಆಡಳಿತ ಸೇವೆ, ವೈದ್ಯಕೀಯ ರಂಗ, ತಾಂತ್ರಿಕ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿ ವಿದೇಶಗಳಲ್ಲೂ ದೇಶದ ಪತಾಕೆ ಹಾರಿಸಿದ್ದಾರೆ ಎಂದು ಹರ್ಷ ವ್ಯಕ್ತ ಪಡಿಸಿದರು. ನರ್ಸರಿ ಮಕ್ಕಳಿಗೆ ಬಲೂನ್ ಹಾಗೂ ಪ್ರಾಥಮಿಕ ಶಾಲಾ ಮಕ್ಕಳಿಗೆ ಲೇಖನ ಸಾಮಾಗ್ರಿ ಕೊಟ್ಟು ಪುಷ್ಪಾರ್ಚನೆ ಮಾಡಿ, ಆರತಿ ಬೆಳಗಿ ಸ್ವಾಗತಿಸುವ ಮೂಲಕ ಮಕ್ಕಳನ್ನು ಆತ್ಮೀಯವಾಗಿ ಬರಮಾಡಿಕೊಳ್ಳಲಾಯಿತು.

ಆರಂಭದಲ್ಲಿ ರಶ್ಮಿ ಮತ್ತು ತಂಡದಿಂದ ಪ್ರಾಥನೆ, ಆಡಳಿತಾಧಿಕಾರಿ ಮಲ್ಲಮ್ಮ ನಾಗರಾಜ್ ಸ್ವಾಗತಿಸಿದರೆ, ಕೋ-ಆರ್ಡಿನೇಟರ್ ರಾಬಿಯಾ, ಮಕ್ಕಳುಅನುಸರಿಸಬೇಕಾದಕ್ರಮಗಳನ್ನುತಿಳಿಸಿದರು.ಮುಖ್ಯೋಪಾಧ್ಯಯ ಮಹಮ್ಮದ್ ಫರ್ಹಾನ್ ಕೊನೆಯಲ್ಲಿ ವಂದನಾರ್ಪಣೆ ಮಾಡಿದರು.

## ಪ್ರಮುಖ ಸುದ್ದಿ

# ಮತ ಚಲಾವಣೆಗೆ ಸರತಿ ಸಾಲಿನಲ್ಲಿ ನಿಂತು ಸುಸ್ತಾದ ಶಿಕ್ಷಕರು

» ಚಿತ್ರದುರ್ಗ


ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಬಿರುಸಿನ ಮತದಾನ ನಡೆಯಿತು.

ಬೆಳಿಗ್ಗೆ ಎಂಟು ಗಂಟೆಗೆ ಮತದಾನ ಆರಂಭವಾದರೂ 11 ಗಂಟೆಯತನ ಮತದಾನ ಮಂದಗತಿಯಲ್ಲಿ ಸಾಗಿತು. ಮಧ್ಯಾಹ್ನ ಒಂದು ಗಂಟೆ ಸುಮಾರಿಗೆ ನೂರಾರು ಶಿಕ್ಷಕ-ಶಿಕ್ಷಕಿಯರು ಸರತಿ ಸಾಲಿನಲ್ಲಿ ನಿಂತು ಮತ ಚಲಾಯಿಸಿದರು. ಕೆಲವು ಶಿಕ್ಷಕರುಗಳು ಸಾಲಿನಲ್ಲಿ ನಿಂತು ಸುಸ್ತಾಗಿ ಕಟ್ಟೆ ಮೇಲೆ ಕುಳಿತಿದ್ದುದು ಕಂಡು ಬಂದಿತು.ಎರಡು ಮತಘಟ್ಟೆಗಳನ್ನು ತೆರೆದಿದ್ದು, ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಮಧ್ಯಾಹ್ನ ಮೂರು ಗಂಟೆಯ ನಂತರ ಶಿಕ್ಷಕರು ಲವಲವಿಕೆಯಿಂದ ಮತದಾನ ಮಾಡಿದರು.

ಡಾ.ಬಿ.ಅಂಬೇಡ್ಕರ್ ಪ್ರತಿಮೆ ಮುಂಭಾಗ ನಗರಸಭೆಗೆ ಹೋಗುವ ದಾರಿಯಲ್ಲಿ ಬ್ಯಾರಿಕೇಡ್‌ಗಳನ್ನಿಟ್ಟು ಮತದಾರ ಶಿಕ್ಷಕರುಗಳಿಗೆ ಮಾತ್ರ ಮತ ಕೇಂದ್ರಕ್ಕೆ ಬಿಡಲಾಯಿತು.



**ಟೇಬಲ್‌ಗೆ ಕುಳಿತ ಜಿ.ಹೆಚ್.ತಿಪ್ಪಾರೆಡ್ಡಿ :** ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ನಗರ ಠಾಣೆ ಪಕ್ಕದ ರಸ್ತೆಯಲ್ಲಿ ಹಾಕಿದ್ದ ಶಾಮಿಯಾನದಡಿ ಟೇಬಲ್‌ನಲ್ಲಿ ಕುಳಿತಿದ್ದು, ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿರವರ ಪರ ಶಿಕ್ಷಕರುಗಳಲ್ಲಿ ಮತಯಾಚಿಸಿದರು. ಮತ್ತೊಂದು ಬದಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಇವರುಗಳು ಟೇಬಲ್‌ನಲ್ಲಿ ಕುಳಿತು ಮತದಾರ ಶಿಕ್ಷಕರಗಳಿಗೆ ಓಟಿಂಗ್ ಸ್ಲಿಪ್ ನೀಡುತ್ತಿದ್ದರು. ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಹಾಗೂ ಜಿಲ್ಲಾ ಉಸ್ತುವರಿ ಸಚಿವ ಡಿ.ಸುಧಾಕರ್ ಇವರುಗಳು ಉಭಯ ಕುಶಲೋಪರಿ ಹಂಚಿಕೊಂಡರು. ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ. ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಈ ಸಂದರ್ಭದಲ್ಲಿದ್ದರು.






ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಪರಸ್ಪರರು ಉಭಯ ಕುಶಲೋಪರಿ ಹಂಚಿಕೊಳ್ಳುತ್ತಿರುವುದು.

## ಫಾಸ್ಟ್ ನ್ಯೂಸ್

### ಘಟಪರ್ತಿ ಗ್ರಾಪಂ ನೂತನ ಅಧ್ಯಕ್ಷರಾಗಿ ದುರ್ಗಮ್ಮಬಾಬು ಆಯ್ಕೆ



» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ಘಟಪರ್ತಿ ಗ್ರಾಮ ಪಂಚಾಯಿತಿ ಅಧ್ಯಕ್ಷರ ಆಯ್ಕೆಗೆ ಜೂನ್3ರ ಸೋಮವಾರ ಚುನಾವಣೆ ನಡೆದಿದ್ದು, ಪಂಚಾಯಿತಿ ನೂತನ ಅಧ್ಯಕ್ಷರಾಗಿ ದುರ್ಗಮ್ಮಬಾಬು ಅವಿರೋಧ ಆಯ್ಕೆಯಾದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಬಿ.ಎಸ್.ಲಕ್ಷ್ಮಣ್ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದರು. ಪ್ರಸ್ತುತ ಗ್ರಾಮ ಪಂಚಾಯಿತಿಯಲ್ಲಿ 21 ಚುನಾಯಿತ ಸದಸ್ಯರು ಆಯ್ಕೆಯಾಗಿದ್ದು, ಆಪೈಕಿ ಓರ್ವ ಸದಸ್ಯ ಮೃತಪಟ್ಟು, 20 ಸದಸ್ಯರು ಮಾತ್ರ ಅಧಿಕಾರ ಚಲಾವಣೆ ಮಾಡಿದ್ದಾರೆ. ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯಲ್ಲಿ 13 ಸದಸ್ಯರು ಭಾಗವಹಿಸಿ ನೂತನ ಅಧ್ಯಕ್ಷರಾಗಿ ದುರ್ಗಮ್ಮಬಾಬುರವರನ್ನು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ವೀರಭದ್ರಪ್ಪ, ಪಾಪಣ್ಣ, ಸೇವಾನಾಯ್ಕ, ರವಿಕುಮಾರ್, ಮಂಜುನಾಥ, ಲೋಕೇಶ್, ನಿರಂಜನ್‌ಗೌಡ, ಲಕ್ಷ್ಮೀದೇವಿ, ಮಂಜಮ್ಮ, ದುರ್ಗಪ್ಪ, ರುದ್ರೇಶ್, ಪಿಡಿಒ ಹೊನ್ನೂರಪ್ಪ ಮುಂತಾದವರು ಉಪಸ್ಥಿತರಿದ್ದರು.

### ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ: ಮೌಲ್ವಿ ಮೇಲೆ ಫೋಕ್ಸೋ ಕೇಸ್

» **ಚಿತ್ರದುರ್ಗ**

ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಆರೋಪದಡಿಯಲ್ಲಿ ಚಿತ್ರದುರ್ಗದಲ್ಲಿ ಮಸೀದಿಯ ಹಜರತ್ (ಮೌಲ್ವಿ) ಮೇಲೆ ಫೋಕ್ಸೋ ಕೇಸ್ ದಾಖಲಾಗಿದ್ದು, ಆರೋಪಿ ಮೌಲ್ವಿಯನ್ನು ಮಹಿಳಾ ಠಾಣೆ ಪೊಲೀಸರು ಬಂಧಿಸಿದ್ದಾರೆ. ಮೂರು ವರ್ಷದಿಂದ ಖುರಾನ್ ಓದಲು ಬಾಲಕಿ ಮಸೀದಿಗೆ ಹೋಗುತ್ತಿದ್ದಳು. ಈ ವೇಳೆ ಬಾಲಕಿಗೆ ದೆವ್ವ ಹಿಡಿದಿದೆ, ಮನೆಯಲ್ಲೇ ಪರಿಹಾರ ಪೂಜೆ ಮಾಡಬೇಕು ಎಂದು ಮೌಲ್ವಿ ಹೇಳಿದ್ದನು. ಇದನ್ನು ನಂಬಿದ ಬಾಲಕಿ ಕುಟುಂಬದವರು ಪೂಜೆಗೆ ಅನುಮತಿ ನೀಡಿದರು. ಪೂಜೆ ಮಾಡುವ ನೆಪದಲ್ಲಿ ಮೌಲ್ವಿ 6ರಿಂದ 7 ತಿಂಗಳುಗಳ ಕಾಲ ವಾರಕೊಮ್ಮೆ ಬಾಲಕಿ ಮನೆಗೆ ಹೋಗಿದ್ದಾನೆ. ಮನೆಗೆ ಹೋದಾಗ ಬಾಲಕಿ ಮತ್ತು ಆಕೆಯ ಸಹೋದರನನ್ನು ಕೋಣೆಯೊಳಗೆ ಕರೆದೊಯ್ಯುತ್ತಿದ್ದನು. ಬಾಲಕಿ ತಾಯಿಯನ್ನು ಕೋಣೆಯ ಹೊರಗೆ ಇರುವಂತೆ ಹೇಳುತ್ತಿದ್ದನು. ಕೋಣೆಯಲ್ಲಿ ಇಬ್ಬರನ್ನು ಕೂರಿಸಿ ನಿನ್ನ ಸಹೋದರಿಗೆ ದೆವ್ವ ಮೆಟ್ಟಿದೆ, ದೈಹಿಕ ಸುಖ ಕೊಟ್ಟರೆ ಶಾಂತಿ ಸಿಗುತ್ತದೆ ಎಂದು ಬಲವಾಗಿ ನಂಬಿಸಿದ್ದನು. ಮೌಲ್ವಿಯ ಪ್ರೇರಣೆಯಂತೆ ಸಹೋದರ ಸಹೋದರಿ ಮೇಲೆ ಅತ್ಯಾಚಾರವೆಸಗಿದ್ದಾನೆ. ಇದನ್ನು ವಿಡಿಯೋ ರೆಕಾರ್ಡ್ ಮಾಡಿಕೊಂಡ ಮೌಲ್ವಿ, ಬಳಿಕ ತಾನೂ ಬಾಲಕಿ ಮೇಲೆ ನಿರಂತರವಾಗಿ ದೌರ್ಜನ್ಯ ಎಸಗಿದ್ದಾನೆ. ಪೂಜೆ ನೆಪದಲ್ಲಿ 6 ರಿಂದ 7 ತಿಂಗಳು ಕಾಲ ಮೌಲ್ವಿ ಬಾಲಕಿಯನ್ನು ದೈಹಿಕವಾಗಿ ಬಳಸಿಕೊಂಡಿದ್ದಾನೆ. ಒಂದು ದಿನ ಬಾಲಕಿ ಹೊಟ್ಟೆ ನೋವು ಎಂದಾಗ ಪೋಷಕರು ಆಸ್ಪತ್ರೆಗೆ ದಾಖಲಿಸಿದಾಗ ಲೈಂಗಿಕ ದೌರ್ಜನ್ಯದ ಪ್ರಕರಣ ಬಯಲಾಗಿದೆ. ಸಂತ್ರಸ್ತೆಯ ತಾಯಿ ಚಿತ್ರದುರ್ಗ ಮಹಿಳಾ ಪೊಲೀಸ್ ಠಾಣೆಯಲ್ಲಿ ಆರೋಪಿ ಮೌಲ್ವಿ, ಸಂತ್ರಸ್ತೆಯ ಸಹೋದರನ ವಿರುದ್ಧ ದೂರು ದಾಖಲಿಸಿದ್ದಾರೆ. ದೂರು ದಾಖಲಾಗುತ್ತಿದ್ದಂತೆ ಮೌಲ್ವಿ ಹಾಗೂ ಬಾಲಕಿಯ ಸಹೋದರನನ್ನು ಚಿತ್ರದುರ್ಗ ಮಹಿಳಾ ಪೊಲೀಸ್ ಠಾಣೆ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

### ಹೆಚ್ಚು ಸ್ಥಾನ ಎನ್‌ಡಿಎ ಗೆದ್ದರೆ ಆಶ್ಚರ್ಯ ಪಡಬೇಕಿಲ್ಲ: ಕಾರಜೋಳ

» **ಚಿತ್ರದುರ್ಗ**

ನನ್ನ ರಾಜಕೀಯ ಅನುಭವ ಮತ್ತು ಲೆಕ್ಕಾಚಾರದ ಪ್ರಕಾರ ಕರ್ನಾಟಕ ಲೋಕಸಭಾ ಚುನಾವಣೆಯಲ್ಲಿ 24ಕ್ಕಿಂತಲ್ಲೂ ಹೆಚ್ಚು ಸ್ಥಾನವನ್ನು ಎನ್.ಡಿ.ಎ ಗೆದ್ದರೆ ಆಶ್ಚರ್ಯ ಪಡಬೇಕಿಲ್ಲ, ಇನ್ನೂ ಹೆಚ್ಚಳವಾದರೂ ಆಗಬಹುದಾಗಿದೆ ಎಂದು ಎನ್.ಡಿ.ಎ.ಮೈತ್ರಿಕೂಟದ ಅಭ್ಯರ್ಥಿ ಗೋವಿಂದ ಕಾರಜೋಳ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ. ಚಿತ್ರದುರ್ಗ ನಗರದಲ್ಲಿ ನಡೆದ ಆಗ್ನೇಯ ಶಿಕ್ಷಕರ ಚುನಾವಣೆ ಸಂದರ್ಭದಲ್ಲ ತಮ್ಮನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು. 2024ರ ಲೋಕಸಭಾ ಚುನಾವಣೆ ನರೇಂದ್ರ ಮೋದಿಯವರ 10 ವರ್ಷದ ಅನುಭವ ಆಧಾರದ ಮೇಲೆ ದೇಶದ ಅಭೀವೃದ್ಧಿ, ದೇಶದ ರಕ್ಷಣೆ, ಮತ್ತು ದೀನ ದಲಿತರ ಕಲ್ಯಾಣಕ್ಕಾಗಿ ಸಾಮಾನ್ಯ ವರ್ಗದವರ ಕಲ್ಯಾಣಕ್ಕಾಗಿ ಹಾಕಿಕೊಂಡ ಕಾರ್ಯಕ್ರಮಗಳು ಮತ್ತು ಅಭೀವೃದ್ಧಿ, ಅದರ ವಿರುದ್ದವಾಗಿ ಕಾಂಗ್ರೆಸ್‌ನ 60 ವರ್ಷದ ಆಡಳಿತದಲ್ಲಿ ಆಗಿರುವ ಅಭಿವೃದ್ಧಿಯನ್ನು ತುಲಾನ್ಮಾಕವಾಗಿ ಈ ದೇಶದ ಜನ ನೋಡಿದ ನಂತರ ತೀರ್ಮಾನಕ್ಕೆ ಬಂದು ಈ ದೇಶ ಸುರಕ್ಷಿತವಾಗಿ ಇರಬೇಕಾದರೆ ದೇಶದ ಅಭೀವೃದ್ಧಿಯಾಗಬೇಕಾದರೆ ಈ ದೇಶ ಪ್ರಪಂಚದ ಇನ್ನೂಳಿದ ರಾಷ್ಟ್ರಗಳ ಜೊತೆ ಅಭೀವೃದ್ಧಿಯಲ್ಲಿ ಪೈಪೋಟಿ ಮಾಡಬೇಕಾದರೆ ಮತ್ತೋಮ್ಮೆ ಮೋದಿಜಿ ಅವಶ್ಯಕ ಎಂದು ತಿಳಿದು ಜನ ಬೆಂಬಲಿಸಿದ್ದಾರೆ.

# ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಚಳ್ಳಕೆರೆಯಲ್ಲಿ ಮತದಾನ ಶಾಂತಿಯುತ

» **ಚಳ್ಳಕೆರೆ**

ಆಗ್ನೇಯ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯ ಮತದಾನ ನಗರದ ಬಿಎಂ ಸರ್ಕಾರಿ ಪ್ರೌಢಶಾಲೆಯ ನೂತನ ಕಟ್ಟಡದಲ್ಲಿ ಶಾಂತಿಯುತವಾಗಿ ನಡೆಯಿತು. ತಾಲ್ಲೂಕಿನಾದ್ಯಂತ ಮತದಾನದ ಹಕ್ಕು ಪಡೆದ ಎಲ್ಲಾ ಶಿಕ್ಷಕರು ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡರು.

ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್, ಬಿಜೆಪಿ ಬೆಂಬಲಿತ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ, ಪಕ್ಷೇತರ ಅಭ್ಯರ್ಥಿಯಾಗಿ ಲೋಕೇಶ್‌ತಾಳಿಕಟ್ಟೆ, ವಿನೋದ್ ಮುಂತಾದವರು ಚುನಾವಣೆ ಕಣದಲ್ಲಿದ್ದು, ಕಾಂಗ್ರೆಸ್ ಹಾಗೂ ಬಿಜೆಪಿ ಅಭ್ಯರ್ಥಿಗಳ ಪರ ಬೆಂಬಲಿಗರ ಓಡಾಟ ಜೋರಾಗಿತ್ತು. ಸಾರ್ವಜನಿಕ ರಸ್ತೆಯ ಬದಿಯಲ್ಲೇ ನಿಂತು ಮತಹಾಕಲು ಬಂದ ಶಿಕ್ಷಕರಿಗೆ ಅಭ್ಯರ್ಥಿಪರ ಮತಚಲಾವಣೆ ಮಾಡುವಂತೆ ಹಣ ನೀಡಿ ಮತ ಹಾಕಲು ಪ್ರೇರೇಪಿಸುತ್ತಿದ್ದಾರೆಂದು ಸಾರ್ವಜನಿಕ ವಲಯದಲ್ಲಿ ಆರೋಪ ಕೇಳಿ ಬಂತು. ಬೆಳಗ್ಗೆ 8ಕ್ಕೆ ಮತದಾನ ಆರಂಭವಾದರೂ ಮಧ್ಯಾಹ್ನ 12ವರೆಗೂ ಮತದಾನ ನೀರಾಸವಾಗಿತ್ತು, ಆದರೆ 2ರ ನಂತರ ಮತಗಟ್ಟೆ ಕೇಂದ್ರದ ಎರಡೂ ಬದಿಯಲ್ಲಿ ಸರಥಿಸಾಲಿನಲ್ಲಿ ನಿಂತು ಶಿಕ್ಷಕರು ತಮ್ಮ ಹಕ್ಕು ಚಲಾಯಿಸಿದರು. ಮತಗಟ್ಟೆ ಕೇಂದ್ರದಲ್ಲಿ ಒಟ್ಟು 1019 ಮತಗಳು ಚಲಾವಣೆಯಾಗಬೇಕಿದೆ. ಆದರೆ, ಮಧ್ಯಾಹ್ನ 4ರ ಅವಧಿ ಮುಗಿದ ನಂತರವೂ ಮತಗಟ್ಟೆ ಕೇಂದ್ರದಲ್ಲಿ ನೂರಾರು ಶಿಕ್ಷಕರು ಮತ ಚಲಾಯಿಸಲು ಸರಥಿಸಾಲಿನಲ್ಲಿ ನಿಂತಿದ್ದರು. ತಹಶೀಲ್ದಾರ್ ರೇಹಾನ್‌ಪಾಷ ಸಾಲಿನಲ್ಲಿ ನಿಂತ ಎಲ್ಲಾ ಶಿಕ್ಷಕರಿಗೂ ಮತದಾನ ಅವಕಾಶ ಮಾಡಿಕೊಡಲಾಗುವುದು ಎಂದರು.

ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ, ಬಿಜೆಪಿ ಅಭ್ಯರ್ಥಿ ಗೋವಿಂದಕಾರಜೋಳ, ಜಿಲ್ಲಾ ಬಿಜೆಪಿ ಅಧ್ಯಕ್ಷ ಎ.ಮುರುಳಿ, ಜಿಲ್ಲಾ ಕಾರ್ಯದರ್ಶಿ ಬಾಳೆಮಂಡಿರಾಮದಾಸ್ ಮುಂತಾದವರು ಉಪಸ್ಥಿತರಿದ್ದರು.







## ಯೋಗಾಸನ ಸ್ಪರ್ಧೆ: ಕರ್ನಾಟಕ ಪ್ರಥಮ ಸ್ಥಾನ

» **ದಾವಣಗೆರೆ**

ಸ್ಕೂಲ್ ಗೇಮ್ಸ್ ಸ್ಪೋರ್ಟ್ಸ್ ಡೆವಲಪ್ಮೆಂಟ್ ಫೌಂಡೇಶನ್ ತಮಿಳುನಾಡು ಸ್ಕೂಲ್ ಗೇಮ್ಸ್ ಸ್ಪೋರ್ಟ್ಸ್ ಡೆವಲಪ್ಮೆಂಟ್ ಫೌಂಡೇಶನ್ ಇಂಡಿಯಾ ಇವರ ಸಂಯುಕ್ತ ಆಶ್ರಯದಲ್ಲಿ ದಿನಾಂಕ ಮೇ 31 ಮತ್ತು ಜೂನ್ 1 ರಂದು ನಡೆದ ಐದನೇ ಅಂತರಾಷ್ಟ್ರೀಯ ಕ್ರೀಡಾ ಸ್ಪರ್ಧೆಗಳು ಗೋವಾದ ಡೆಕಾಥ್ಲಾನ್ ಆವರಣದಲ್ಲಿ ನಡೆದ ಅಂತರಾಷ್ಟ್ರೀಯ ಯೋಗಾಸನ ಸ್ಪರ್ಧೆಯಲ್ಲಿ ಕರ್ನಾಟಕದ ದಾವಣಗೆರೆ ಜಿಲ್ಲೆಯ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಗಳಿಸುವುದರ ಮೂಲಕ ತಂಡದ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದೆ.

1) 14ನೇ ವಯಸ್ಸಿನ ಬಾಲಕರ ವಿಭಾಗದಲ್ಲಿ ಹರಿಹರದ ಪ್ರಥಮ್ ಯು.ಎಂ. ಪ್ರಥಮ ಸ್ಥಾನ ಪಡೆಯುವುದರ ಮೂಲಕ ಸ್ವರ್ಣ ಪದಕ, 2) 14 ನೇ ವಯಸ್ಸಿನ ಬಾಲಕಿಯರ ವಿಭಾಗದಲ್ಲಿ ಕುಮಾರಿ ಶ್ರೇಯ ಶಿವಪೂಜಿ ಪ್ರಥಮ ಸ್ಥಾನ ಪಡೆಯುವುದರ ಮೂಲಕ ಸ್ವರ್ಣ ಪದಕ, 3) 17ನೇ ವಯಸ್ಸಿನ ಬಾಲಕಿಯರ ವಿಭಾಗದಲ್ಲಿ ತುಮಕೂರಿನ ಮೀನಾಕ್ಷಿ ಪ್ರಥಮ ಸ್ಥಾನ ಪಡೆಯುವುದರ ಮೂಲಕ ಸ್ವರ್ಣ ಪದಕ, 4) 49ನೇ ಹಿರಿಯ ಪುರುಷರ ವಿಭಾಗದಲ್ಲಿ ಧಾರವಾಡ ಜಿಲ್ಲೆಯ ಹಿರೇಹೊನ್ನಳ್ಳಿ ಗ್ರಾಮದ ಗ್ರಾಮ ಪಂಚಾಯಿತಿ ಸದಸ್ಯರಾದ, ಮಯೂರ ಗೌಡ ಎಸ್ ಪಾಟೀಲ್ ಪ್ರಥಮ ಸ್ಥಾನ ಗಳಿಸುವುದರ ಮೂಲಕ ಸ್ವರ್ಣ ಪದಕ, 5) 60 ವರ್ಷ ಪುರುಷರ ಹಿರಿಯರ ವಿಭಾಗದಲ್ಲಿ ಡಾಕ್ಟರೇಟ್ ಪುರಸ್ಕೃತರಾದ ಕೆ. ಜೈಮುನಿ ಪ್ರಥಮ ಸ್ಥಾನ ಗಳಿಸುವುದರ ಮೂಲಕ ಸ್ವರ್ಣ ಪದಕವನ್ನು ಗಳಿಸಿರುತ್ತಾರೆ.

ತಂಡದ ಪ್ರಶಸ್ತಿಯನ್ನು ಸಂಸ್ಥೆಯ ಅಧ್ಯಕ್ಷರಾದ ಅಜಿತ್ ಕುಮಾರ್ ತಮಿಳುನಾಡು, ಇವರು ನೀಡಿದರು .

ವಿಜೇತರಾದವರಿಗೆ ರಾಜ್ಯದ ಮುಖ್ಯಮಂತ್ರಿಗಳು, ಕ್ರೀಡಾ ಸಚಿವರು ಹಾಗೂ ದಾವಣಗೆರೆ ಜಿಲ್ಲೆಯ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್, ಶಾಸಕರಾದ ಶಾಮನೂರು ಶಿವಶಂಕರಪ್ಪ, ಹರಿಹರ ಶಾಸಕರಾದ ಬಿ.ಪಿ.ಹರೀಶ್, ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷರಾದ ವಾಸುದೇವ ರಾಯ್ಕರ್, ಜಿಲ್ಲಾ ಕ್ರೀಡಾ ಅಧ್ಯಕ್ಷರಾದ ಕೆ. ದಿನೇಶ್ ಶೆಟ್ಟಿ, ದಾವಣಗೆರೆ ಸಪ್ತರಿಷಿ ಯೋಗದಾರ್ ಸ್ಪೋರ್ಟ್ಸ್ ಅಕಾಡೆಮಿಯ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದ್ದಾರೆ.




## ಆಗ್ನೇಯ ಶಿಕ್ಷಕರ ಕ್ಷೇತ್ರ: ಶೇ.94.50ರಷ್ಟು ಮತದಾನ



» **ಚಳ್ಳಕೆರೆ**

ಆಗ್ನೇಯ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯಲ್ಲಿ ಶೇ.94.50ರಷ್ಟು ಮತದಾನವಾಗಿದೆ ಎಂದು ಚುನಾವಣಾ ಉಸ್ತುವಾರಿ ಅಧಿಕಾರಿ ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದ್ದಾರೆ.

ಅವರು, ಪತ್ರಿಕೆಗೆ ಮಾಹಿತಿ ನೀಡಿ, ಈ ಬಾರಿಯ ಆಗ್ನೇಯ ಶಿಕ್ಷಕರ ಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯ ಶಿಕ್ಷಕ ಮತದಾರರು ಮತಚಲಾವಣೆ ಮಾಡಿದ್ದಾರೆ. ಕಳೆದ ಹಿಂದಿನ ದಾಖಲಾತಿಗಳಿಗಿಂತ ಈ ಬಾರಿ ಹೆಚ್ಚಿನ ಮತದಾನವಾಗಿದೆ. ತಾಲ್ಲೂಕಿನಾದ್ಯಂತ ಒಟ್ಟು 1019 ಮತದಾರರಿದ್ದು, 754 ಪುರುಷ, 265 ಮಹಿಳಾ ಮತದಾರರು ಮತಚಲಾಯಿಸುವ ಹಕ್ಕು ಪಡೆದಿದ್ದಾರೆ. ಮತದಾನ ಪ್ರಕ್ರಿಯೆ ನಂತರ ಹೆಚ್ಚಿನ ಸಂಖ್ಯೆಯ ಶಿಕ್ಷಕರು ಮತದಾನ ಮಾಡಿರುವುದು ಸಂತಸ ತಂದಿದೆ. 754 ಪುರುಷರಲ್ಲಿ 710 ಪುರುಷರು, 265 ಮಹಿಳೆಯರಲ್ಲಿ 253 ಮಹಿಳೆಯರು ಮತಚಲಾಯಿಸಿದ್ದಾರೆ. ಒಟ್ಟು 963 ಮತದಾರರು ತಮ್ಮ ಹಕ್ಕು ಚಲಾವಣೆ ಮಾಡುವ ಮೂಲಕ ಮತದಾನದ ಶೇಕಡವಾರನ್ನು ಹೆಚ್ಚಿಸಿದ್ದಾರೆ.

ಜಿಲ್ಲಾ ರಕ್ಷಣಾಧಿಕಾರಿಗಳ ಮಾರ್ಗದರ್ಶನದಲ್ಲಿ ಉಪವಿಭಾಗದ ಡಿವೈಎಸ್ಪಿ ರಾಜಣ್ಣ ನೇತೃತ್ವದಲ್ಲಿ ವೃತ್ತ ನಿರೀಕ್ಷಕ ಕೆ.ಕುಮಾರ್ ಮತಗಟ್ಟೆ ಕೇಂದ್ರದ ಮುಂದೆ ಬ್ಯಾರಿಕೇಟ್ ನಿರ್ಮಿಸಿ ಅನಗತ್ಯವಾಗಿ ಯಾರೂ ಸಹ ಮತಗಟ್ಟೆ ಒಳಗೆ ಪ್ರವೇಶಿಸಿದಂತೆ ಸೂಕ್ತಬಂದೋಬಸ್ತ್ ಏರ್ಪಡಿಸಿದ್ದರು. ಪಿಎಸ್‌ಐ ಕೆ.ಸತೀಶ್‌ನಾಯ್ಕ ಸೇರಿದಂತೆ ಹಲವಾರು ಸಿಬ್ಬಂದಿ ವರ್ಗ ಕಾರ್ಯನಿರ್ವಹಿಸಿದರು.

## ಚಿಕ್ಕಪ್ಪನಹಳ್ಳಿಯಲ್ಲಿ ವಿಶ್ವ ತಂಬಾಕು ವಿರೋಧಿ ದಿನಾಚರಣೆ

» **ಚಿತ್ರದುರ್ಗ**

ತಂಬಾಕು, ಬೀಡಿ, ಸಿಗರೇಟು ಸೇವನೆಯಿಂದ ಪ್ರಾಣಕ್ಕೆ ಕುತ್ತು ತರುವ ಕಾಯಿಲೆಗಳನ್ನು ಬರಮಾಡಿಕೊಂಡಂತಾಗುತ್ತದೆ ಎಂದು ಸಿರಿಗೆರೆ ಯೋಜನಾ ಕಚೇರಿ ವ್ಯಾಪ್ತಿಯ ರವಿಚಂದ್ರ ತಿಳಿಸಿದರು. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯಿಂದ ಸಿರಿಗೆರೆ ಯೋಜನಾ ಕಚೇರಿ ವ್ಯಾಪ್ತಿಯ ಚಿಕ್ಕಪ್ಪನಹಳ್ಳಿ ಕಾರ್ಯಕ್ಷೇತ್ರದ ನೇಸರ ಜ್ಞಾನವಿಕಾಸ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು. ಐದತ್ತು ರೂ. ಕೊಟ್ಟು ಖರೀಧಿಸುವ ತಂಬಾಕು ಬೀಡಿಯಿಂದ ಕ್ಯಾನ್ಸರ್‌ನಂತ ಮಾರಕ ಕಾಯಿಲೆಗಳಿಗೆ ಬಲಿಯಾಗಬೇಕಾಗುತ್ತದೆ. ಸಿಗರೇಟು, ಬೀಡಿಯಲ್ಲಿ ನಿಕೋಟಿನ್ ಎಂಬ ವಿಷಕಾರಕವಿರುತ್ತದೆ. ಹಾಗಾಗಿ ಇಂತಹ ದುಶ್ಚಟಗಳಿಂದ ದೂರವಿದ್ದು, ಉತ್ತಮ ಆರೋಗ್ಯ ಕಾಪಾಡಿಕೊಳ್ಳುವಂತೆ ಕರೆ ನೀಡಿದರು. ಜನಜಾಗೃತಿ ವೇದಿಕೆ ಸದಸ್ಯ ರಾಜುನಾಯ್ಕ ಮಾತನಾಡಿ ತಂಬಾಕು, ಬೀಡಿ, ಸಿಗರೇಟು ಸೇವನೆಯಿಂದಾಗುವ ದುಷ್ಪರಿಣಾಮ ಕುರಿತು ಎಚ್ಚರಿಸಿದರು. ವಲಯ ಮೇಲ್ವಿಚಾರಕಿ ಶ್ರೀಮತಿ ವಸಂತ, ಜ್ಞಾನವಿಕಾಸ ಸಮನ್ವಯಾಧಿಕಾರಿ ಶಿವಲೀಲಾ ಎಸ್.ಬಾಗೋಡಿ, ಶ್ಯಾಮಲಮ್ಮ, ಸುಶೀಲಮ್ಮ, ಗೀತ, ರೇಖ, ಮಂಜುಳ, ಜ್ಞಾನವಿಕಾಸ ಕೇಂದ್ರದ ಸದಸ್ಯರುಗಳು ತಂಬಾಕು ವಿರೋಧಿ ದಿನಾಚರಣೆಯಲ್ಲಿ ಭಾಗವಹಿಸಿದ್ದರು.



## ಮೂರ್ಛೆರೋಗ ಪೀಡಿತ ಸಾವು

**ಚಳ್ಳಕೆರೆ:** ತಾಲ್ಲೂಕಿನ ಸೋಮಗುದ್ದು ಗ್ರಾಮದ ಜಯಣ್ಣ(39) ಎಂಬ ವ್ಯಕ್ತಿ ತನಗೆ ಬರುತ್ತಿದ್ದ ಮೂರ್ಛೆ ರೋಗದಿಂದ ಆಗಾಗ ಅನಾರೋಗ್ಯ ಪೀಡಿತನಾಗುತ್ತಿದ್ದು, ಕಳೆದ ಮೇ.29ರ ಸಂಜೆ ಕುರುಡಿಹಳ್ಳಿ ಲಂಬಾಣಿಹಟ್ಟಿ ಬಳಿ ಮೂರ್ಛೆ ರೋಗ ಬಂದು ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಮೃತ ಪತ್ನಿ ಗೌರಮ್ಮ ಈ ಬಗ್ಗೆ ಪೊಲೀಸರಿಗೆ ದೂರು ನೀಡಿ, ನನ್ನ ಗಂಡ ಅನಾರೋಗ್ಯದಿಂದ ಮೃತಪಟ್ಟಿದ್ದು ಯಾವುದೇ ಅನುಮಾನವಿಲ್ಲವೆಂದು ತಿಳಿಸಿದ್ದಾರೆ. ಪಿಎಸ್‌ಐ ಧರಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

**ಪ್ರಮುಖ ಸುದ್ದಿ**

### ಮುಂಗಾರು ಹಂಗಾಮಿನಲ್ಲಿ ಪೂರ್ಣಪ್ರಮಾಣದ ಬಿತ್ತನೆಗೆ ಕೃಷಿ ಇಲಾಖೆ ಸಿದ್ಧತೆ

# ತಾಲ್ಲೂಕಿನಾದ್ಯಂತ 7 ಕಡೆ ಬಿತ್ತನೆ ಬೀಜ ವಿತರಣೆಗೆ ಕ್ರಮ

» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ಮುಂಗಾರು ಮಳೆ ಆರಂಭದ ಶುಭಸೂಚನೆ ದೊರಕಿದ್ದು, ಕಳೆದ ಮೇ. ತಿಂಗಳಲ್ಲಿ ಪೂರ್ವಮುಂಗಾರಿನಲ್ಲಿ ಸುಮಾರು 740 ಎಂ.ಎಂ ಮಳೆ ದಾಖಲಾಗಿ ಈ ಬಾರಿ ಪೂರ್ಣಪ್ರಮಾಣದಲ್ಲಿ ಬಿತ್ತನೆ ಕಾರ್ಯ ನಡೆಯುವ ಸ್ಪಷ್ಟಸೂಚನೆ ಇದೆ ಎಂದು ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ಈ ಬಾರಿಯ ಮುಂಗಾರು ಮಳೆಯಲ್ಲಿ ರೈತ ಸಮುದಾಯಕ್ಕೆ ಯಾವುದೇ ತೊಂದರೆಯಾಗದಂತೆ ಕೃಷಿ ಇಲಾಖೆ ಜಾಗ್ರತೆ ವಹಿಸಿದೆ. ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ಉಪಕೃಷಿ ನಿರ್ದೇಶಕರ ಮಾರ್ಗದರ್ಶನದಲ್ಲಿ ತಾಲ್ಲೂಕಿನಾದ್ಯಂತ ಸುಮಾರು 75 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಸಂಭವವಿದ್ದು, ಕೃಷಿ ಇಲಾಖೆ ಬೀಜ, ಗೊಬ್ಬರ, ಕ್ರಿಮಿನಾಶಕ ಸೇರಿದಂತೆ ಎಲ್ಲವನ್ನೂ ರೈತರಿಗೆ ಸಕಾಲದಲ್ಲಿ ನೀಡಲು ಸನ್ನದ್ದವಾಗಿದೆ ಎಂದರು.

ತಾಲ್ಲೂಕಿನಾದ್ಯಂತ ಒಟ್ಟು 7 ಕಡೆ ಬಿತ್ತನೆ ಬೀಜ ವಿತರಣೆಗೆ ಅವಕಾಶ ಮಾಡಿಕೊಡಲಾಗಿದೆ. ಚಳ್ಳಕೆರೆನಗರ, ಪರಶುರಾಮಪುರ, ನಾಯಕನಹಟ್ಟಿ, ತಳಕು, ದೇವರೆಡ್ಡಿಹಳ್ಳಿ, ದೊಡ್ಡಉಳ್ಳಾರ್ತಿ ಮತ್ತು ರೇಣುಕಾಪುರ ಗ್ರಾಮಗಳಲ್ಲಿ ರೈತ ಸಂಪರ್ಕ ಕೇಂದ್ರಗಳನ್ನು ಆರಂಭಿಸಲಾಗಿದೆ. ಪ್ರಸ್ತುತ 2ಸಾವಿರ ಕ್ವಿಂಟಾಲ್ ಶೇಂಗಾ ಬಿತ್ತನೆ ಬೀಜವನ್ನು ದಾಸ್ತಾನು ಮಾಡಲಾಗಿದೆ. ಇದರೊಂದಿಗೆ ತೊಗರಿ, ಹೆಸರು, ಮೆಕ್ಕೆಜೋಳ, ಸಜ್ಜೆ, ಹಲಸಂದಿ, ಸೂರ್ಯಕಾಂತಿ ಬಿತ್ತನೆ ಬೀಜಗಳನ್ನು ದಾಸ್ತಾನು ಮಾಡಿದೆ. ಶೇಂಗಾ ಬಿತ್ತನೆ ಬೀಜ ಕ್ವಿಂಟಾಲ್‌ಗೆ ಸಾಮಾನ್ಯರಿಗೆ 7600, ಪರಿಶಿಷ್ಟ ಜಾತಿ, ವರ್ಗಕ್ಕೆ 6900 ದರವನ್ನು ನಿಗದಿಪಡಿಸಲಾಗಿದೆ. ಸಾಮಾನ್ಯ ವರ್ಗದ ರೈತರು ಎಫ್‌ಐಡಿ ಸಂಖ್ಯೆ, ಪಹಣಿ, ಪರಿಶಿಷ್ಟ ಜಾತಿ, ವರ್ಗದ ರೈತರು ಎಫ್‌ಐಡಿ ಸಂಖ್ಯೆ, ಪಹಣಿ ಜೊತೆಗೆ ಜಾತಿಪ್ರಮಾಣ ಪತ್ರವನ್ನು ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರಕ್ಕೆ ಬಿತ್ತನೆ ಬೀಜ ಖರೀದಿಸುವ ಸಂದರ್ಭದಲ್ಲಿ ನೀಡಬೇಕಿದೆ. ರೈತರು ಬಿತ್ತನೆ ಸಂದರ್ಭದಲ್ಲಿ ಕೃಷಿ ಇಲಾಖೆಗೆ ಭೇಟಿ ನೀಡಿ ಅಗತ್ಯಸಲಹೆ ಸೂಚನೆಗಳನ್ನು ಪಡೆದು ತಮ್ಮ ಇಳುವರಿಯನ್ನು ಹೆಚ್ಚಿಸಿಕೊಂಡು ಸಮೃದ್ಧ ಬೆಳೆ ಬೆಳೆಯಲು ಕಾಯೋನ್ಮುಖರಾಗುವಂತೆ ಇಲಾಖೆ ಪರವಾಗಿ ಮನವಿ ಮಾಡುವುದಾಗಿ ತಿಳಿಸಿದರು. ಈಗಾಗಲೇ ತಾಲ್ಲೂಕಿನಾದ್ಯಂತ ಬಿತ್ತನೆ ಬೀಜ ವಿತರಣೆ ಕಾರ್ಯವನ್ನು ಮುಂಗಾರು ಆರಂಭದ ಪೂರ್ವದಲ್ಲೇ ವಿತರಣೆಯನ್ನು ಪ್ರಾರಂಭಿಸಲಾಗಿದೆ ರೈತರು ಪೂರ್ಣಪ್ರಮಾಣದಲ್ಲಿ ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ವಿನಂತಿಸಿದ್ದಾರೆ.







# ಆಗಬೇಕಾದ ಕೆಲಸಗಳು
## ನಾವು ಸದಾ ಚರ್ಚಿಸುತ್ತಿರುವ ವಿಷಯಗಳು.......

ದೇಶ ಅಥವಾ ರಾಜ್ಯದಲ್ಲಿ ಇಂದಿನ ದಿನಗಳಲ್ಲಿ ಅತ್ಯಂತ ಅನಿವಾರ್ಯವಾಗಿ, ತೀವ್ರವಾಗಿ, ಅತ್ಯಗತ್ಯವಾಗಿ ಚರ್ಚೆಯಾಗಬೇಕಾದ ವಿಷಯಗಳು.......

1 ತೀವ್ರವಾಗಿ ಕುಸಿಯುತ್ತಿರುವ ಜನರ ಆರೋಗ್ಯ.......

2 ಅತ್ಯಂತ ವೇಗವಾಗಿ ನಾಶವಾಗುತ್ತಿರುವ ಪರಿಸರ ರಕ್ಷಣೆ....

3 ವ್ಯಾಪಕವಾಗಿ ಹರಡಿರುವ ಭ್ರಷ್ಟಾಚಾರದ ಕಾರಣ ಅಭಿವೃದ್ಧಿಯ ಅಸಮರ್ಪಕ ನಿರ್ವಹಣೆ....

4 ಚುನಾವಣಾ ರಾಜಕೀಯದ ಕಾರಣ ಭಾರತೀಯ ಸಾಮಾಜಿಕ ವ್ಯವಸ್ಥೆ ದ್ವೇಷ ಅಸೂಯೆಗಳ ಗೂಡಾಗಿ ಮನಸ್ಸುಗಳು ಒಡೆಯುತ್ತಿವೆ. ಅದನ್ನು ಒಂದುಗೂಡಿಸುವ ಪ್ರಯತ್ನ ಆಗಬೇಕಿದೆ....

5 ಜಾತಿ ಪದ್ಧತಿಯ ನಿರ್ಮೂಲನೆಗೆ ಸಣ್ಣ ಪ್ರಮಾಣದ ಪ್ರಯತ್ನಗಳಾದರು ಸರ್ಕಾರದ ಮಟ್ಟದಲ್ಲಿ ಆಗಬೇಕಿದೆ.....

6 ಭಾರತೀಯ ಸಮಾಜದಲ್ಲಿ ವ್ಯಾಪಕವಾಗುತ್ತಿರುವ ಹಿಂಸಾತ್ಮಕ ಚಟುವಟಿಕೆಗಳನ್ನು ಆದಷ್ಟು ಕಡಿಮೆ ಮಾಡಬೇಕಿದೆ....

7 ಅರ್ಹತೆಗೆ ತಕ್ಕಂತ ಉದ್ಯೋಗ ಸೃಷ್ಟಿಸುವುದನ್ನು ನಿಲ್ಲಿಸಿ ಹೊಟ್ಟೆಪಾಡಿನ ಉದ್ಯೋಗಗಳೇ ಹೆಚ್ಚಾಗುತ್ತಿರುವುದು ನಿರುದ್ಯೋಗ ಹೆಚ್ಚಾಗಲು ಕಾರಣವಾಗಿ ಭವಿಷ್ಯದಲ್ಲಿ ಆಗುವ ದುಷ್ಪರಿಣಾಮಗಳನ್ನು ತಡೆಯಲು ಈಗಿನಿಂದಲೇ ಪ್ರಯತ್ನಿಸಬೇಕಿದೆ....



8 ರೈತರ ಆತ್ಮಹತ್ಯೆ ಮತ್ತು ಕೃಷಿ ದಿನೇ ದಿನೇ ಶೋಚನೀಯ ಸ್ಥಿತಿ ತಲುಪುತ್ತಿದೆ. ಅದಕ್ಕೆ ಪರಿಹಾರವನ್ನು ಯುದ್ಧೋಪಾದಿಯಲ್ಲಿ ಪರಿಹರಿಸಬೇಕಾಗಿದೆ....

9 ಆಹಾರದ ಕಲಬೆರಕೆ ಭಾರತೀಯರ ಆಯಸ್ಸನ್ನೇ ಕಡಿಮೆ ಮಾಡುತ್ತಿದೆ. ಅದಕ್ಕೆ ತತ್ ತಕ್ಷಣ ಕ್ರಮಗಳನ್ನು ಕೈಗೊಳ್ಳಬೇಕಿದೆ....

10 ಮಾದಕ ವಸ್ತುಗಳ ನಿಯಂತ್ರಣ ಮತ್ತು ಆನ್ ಲೈನ್ ಜೂಜು ಕೇಂದ್ರಗಳ ನಿಷೇಧ ಹೇರದಿದ್ದರೆ ಯುವ ಸಮೂಹ ಸಂಪೂರ್ಣ ನಾಶವಾಗುತ್ತದೆ. ಅದಕ್ಕಾಗಿ ಮಾರ್ಗೋಪಾಯಗಳನ್ನು ಕಂಡುಹಿಡಿಯಬೇಕಿದೆ.....

ಆದರೆ ಮಾಧ್ಯಮಗಳು, ಸಾಮಾಜಿಕ ಜಾಲತಾಣಗಳು, ರಾಜಕಾರಣಿಗಳು, ಅಧಿಕಾರಿಗಳು, ಧಾರ್ಮಿಕ ಮುಖಂಡರು, ಹೋರಾಟಗಾರರು ಚರ್ಚೆ ಮಾಡುತ್ತಿರುವ ವಿಷಯಗಳು ಬೇರೆಯೇ ಇದೆ......

1 ಮುಂದಿನ ಲೋಕಸಭಾ ಚುನಾವಣೆಯನ್ನು ಯಾವ ಯಾವ ತಂತ್ರಗಳನ್ನು ಉಪಯೋಗಿಸಿ ಗೆಲ್ಲಬೇಕು ಎಂಬುದೇ ಬಹುಮುಖ್ಯ ಚರ್ಚೆಯ ವಿಷಯವಾಗಿದೆ.....

2 ಅಯೋಧ್ಯೆ ರಾಮ ಮಂದಿರ ಉದ್ಘಾಟನಾ ಸಮಾರಂಭದ ರಾಜಕೀಯ ಲಾಭಗಳನ್ನು ಹೇಗೆ ಪಡೆಯಬೇಕು........

3 ಗ್ಯಾರಂಟಿ ಯೋಜನೆಗಳ ಮೂಲಕ ಮತದಾರರನ್ನು ಯಾವ ರೀತಿ ಆಕರ್ಷಿಸಬೇಕು......

4 ಜಾತಿ ಜನಗಣತಿಯ ವಿಷಯವನ್ನು ಹೇಗೆ ಚುನಾವಣಾ ತಂತ್ರವಾಗಿ ಲಾಭ ಮಾಡಿಕೊಳ್ಳಬೇಕು......

5 ಹಿಂದೂ ಮುಸ್ಲಿಂ ಮತದಾರರನ್ನು ಯಾವ ರೀತಿಯಲ್ಲಿ ವಿಭಜಿಸಿ ಅದನ್ನೇ ಪ್ರಮುಖ ಅಸ್ತ್ರವಾಗಿ ಅಧಿಕಾರ ಹಿಡಿಯಬಹುದು....

6 ಎಡಪಂಥೀಯ ಮತ್ತು ಬಲಪಂಥೀಯ ವಿಚಾರಗಳ ಮೇಲೆಯೇ ನಮ್ಮ ಅಭಿಪ್ರಾಯ ರೂಪಿಸಿಕೊಂಡು ಅನವಶ್ಯಕವಾಗಿ ಚರ್ಚಿಸುತ್ತಾ ಕಾಲ ಕಳೆಯುವುದು......

7 ಆರ್ಯ – ದ್ರಾವಿಡ ಸಂಸ್ಕೃತಿಗಳ ಆಧಾರದ ಮೇಲೆ ವಿಭಜನಾತ್ಮಕ ಮನಸ್ಥಿತಿಯನ್ನು ಜನರಲ್ಲಿ ಬಿತ್ತುವುದು.....

8 ನೀರು – ಭಾಷೆಯ ವಿವಾದಗಳನ್ನು ಸದಾ ಚರ್ಚಿಸುತ್ತ ಅದನ್ನು ವಿವಾದವಾಗಿ ಸದಾ ಜೀವಂತ ಇಡುವುದು.....

9 ಟೋಲ್ ಪೆಟ್ರೋಲ್ ಗ್ಯಾಸ್ ಜಿಎಸ್ಟಿ ಆಹಾರ ಪದಾರ್ಥಗಳು ಮುಂತಾದ ಬೆಲೆಗಳನ್ನು ಏರಿಸುತ್ತಾ ಒಮ್ಮೊಮ್ಮೆ ಅಲ್ಪ ಪ್ರಮಾಣದಲ್ಲಿ ಇಳಿಸುತ್ತಾ ಜನರಲ್ಲಿ ಅದರ ಬಗ್ಗೆಯೇ ಯೋಚಿಸುವಂತೆ ಮಾಡುವುದು.....

10 ನಿರುದ್ಯೋಗ ನಿವಾರಣೆಯ ಭರವಸೆ, ವಿದೇಶದಿಂದ ಕಪ್ಪು ಹಣದ ತರುವ ಆಶ್ವಾಸನೆ ಹೀಗೆ ಮತ್ತೆ ಮತ್ತೆ ಅದೇ ವಿಷಯಗಳ ಪ್ರಸ್ತಾಪ......

ಹೀಗೆ ಜನರ ಮೂಲಭೂತ ಅವಶ್ಯಕತೆಗಳೇ ಬೇರೆ. ಜನಸಾಮಾನ್ಯರು ಸೇರಿ ಎಲ್ಲರೂ ಚರ್ಚಿಸುವ ವಿಷಯಗಳೇ ಬೇರೆ......

ಒಟ್ಟಿನಲ್ಲಿ ಇಡೀ ದೇಶ ರಾಜಕಾರಣಿಗಳ ಅಧಿಕಾರ ದಾಹದ ಸುತ್ತಲೇ ಸುತ್ತುತ್ತ ಪ್ರಜಾಪ್ರಭುತ್ವ ಪರೋಕ್ಷವಾಗಿ ರಾಜಪ್ರಭುತ್ವದ ರೀತಿಯಲ್ಲಿಯೇ ಕಾರ್ಯನಿರ್ವಹಿಸುತ್ತಿರುವಂತಿದೆ. ಜಾಗೃತರಾಗಬೇಕಾದವರು ಕಾರ್ಪೊರೇಟ್ ಸಂಸ್ಥೆಗಳು ತಂತ್ರಗಾರಿಕೆಗೆ ಬಲಿಯಾಗಿ ಅವರ ಗುಲಾಮರಾಗಿಯೇ ತಮಗರಿವಿಲ್ಲದೆ ಬಂಧಿಯಾಗಿದ್ದಾರೆ.....


ಏಳು ಸುತ್ತಿನ ಕೋಟೆಯ ಒಳಗೆ ನುಗ್ಗುವ ಕೆಲಸವನ್ನು ಪ್ರಜ್ಞಾವಂತರು ಮಾಡಬೇಕಿದೆ. ಅದು ಕಷ್ಟದ ಕೆಲಸವಾದರು ಅಸಾಧ್ಯವಲ್ಲ. ಆ ನಿಟ್ಟಿನಲ್ಲಿ ಪ್ರಯತ್ನಗಳು ಸಾಗಲಿ ಎಂದು ಆಶಿಸುತ್ತಾ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

# ನಾಗೇಂದ್ರ ಪ್ರಕರಣ ಸರ್ಕಾರಕ್ಕೆ ಯಾವುದೇ ತೆಲೆನೋವು ಇಲ್ಲ: ಸುಧಾಕರ್

» ಚಿತ್ರದುರ್ಗ

2014ರಲ್ಲಿ ಬಿಜೆಪಿ ಪಕ್ಷ ಕೇಂದ್ರದಲ್ಲಿ ಚುನಾವಣೆ ಸಮಯದಲ್ಲಿ 15 ಲಕ್ಷ ಮತ್ತು 2 ಕೋಟಿ ಉದ್ಯೋಗ ಎಂದು ಹೇಳಿತ್ತು ಆದರೆ ಇದುವರೆವಿಗೂ ಸಹಾ ಒಂದು ಉದ್ಯೋಗವನ್ನು ಸಹಾ ನೀಡಲ್ಲ ನಮ್ಮ ಯುವ ಜನತೆ ಉದ್ಯೋಗಕ್ಕಾಗಿ ಬೀದಿ ಬೀದಿ ಅಲೆಯುತ್ತಿದ್ದಾರೆ. ಇನ್ನೂ 15 ಲಕ್ಷ ಯಾರ ಅಕೌಂಟಿಗೂ ಸಹಾ ಬಂದಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಕೇಂದ್ರವನ್ನು ತರಾಟೆಗೆ ತೆಗೆದುಕೊಂಡರು.

ಚಿತ್ರದುರ್ಗ ನಗರದಲ್ಲಿ ಆಗ್ನೇಯ ಶಿಕ್ಷಕರ ಚುನಾವಣೆಯ ಹಿನ್ನಲೆಯಲ್ಲಿ ನಗರಕ್ಕೆ ಬೇಟಿ ನೀಡಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ನಾಗೇಂದ್ರ ಪ್ರಕರಣ ಸರ್ಕಾರಕ್ಕೆ ಯಾವುದೇ ತೆಲೆನೋವು ಇಲ್ಲ, ಹಣವನ್ನು



ವಸೂಲಿ ಮಾಡುತ್ತಿದ್ದಾರೆ. ಮುಖ್ಯಮಂತ್ರಿಗಳು ಎಸ್.ಐ.ಟಿಯನ್ನು ನಿರ್ಮಾಣ ಮಾಡಿದ್ದಾರೆ. ಹಣವನ್ನು ವಸೂಲಿ ಮಾಡುವಂತ ಕಾರ್ಯವನ್ನು ಮಾಡುತ್ತಿದ್ದಾರೆ, ಇದರಲ್ಲಿ ಮುಖ್ಯಮಂತ್ರಿಗಳು ಸ್ಪಷ್ಟವಾಗಿ ಸೂಚನೆಯನ್ನು ನೀಡಿದ್ದು ಇದರಲ್ಲಿ ಯಾರನ್ನು ರಕ್ಷಣೆ ಮಾಡುವ ಪ್ರಮಯವೇ ಇಲ್ಲ, ಇದರ ಹಿಂದೆ ಅಡಗಿರುವ ಷಡ್ಯಂತ್ರ ಹೊರತರುವ ಕಾರ್ಯವನ್ನು ಮಾಡಲಾಗುತ್ತಿದೆ.

ಬಿಜೆಪಿಯವರ ಅಧಿಕಾರವನ್ನು ಕಳೆದ ಕೊಂಡಿದ್ದಾರೆ ಅವರಿಗೆ ಮಾಡಲು ಕೆಲಸ ಇಲ್ಲ ಸರ್ಕಾರದ ವಿರುದ್ದ ಪ್ರತಿಭಟನೆಯನ್ನು ಮಾಡುವುದೆ ಆವರ ಕೆಲಸವಾಗಿದೆ. ಅವರಿಗೆ ಪ್ರತಿಭಟನೆಗಳು ಧರಣಿಗಳು ಅವರಿಗೇನು ಹೊಸದಲ್ಲಿ ಮಾಡಲಿ ಬಿಡಿ ಸಚಿವ ನಾಗೇಂದ್ರರವರ ರಾಜೀನಾಮೆ ಬಗ್ಗೆ ನನಗೆ ಮಾಹಿತಿ ಇಲ್ಲ, ಲೋಕಸಭಾ ಚುನಾವಣೆಯ ಸಮೀಕ್ಷೆಯಬಗ್ಗೆ ಕಾಂಗ್ರೆಸ್ ಪಕ್ಷದ ಚರ್ಚೆಯನ್ನು ನಡೆಸಿದೆ ಇದರ ಬಗ್ಗೆ ಡಿಕೆ.ಶಿವಕುಮಾರ್ ರವರು ಇದರಲ್ಲಿ ಕಾರ್ಯಕರ್ತರ ಅಭೀಪ್ರಾಯ ಮುಖ್ಯವಾಗುತ್ತದೆ ನಾವು ಸಹಾ ಫಿಲ್ಡನಲ್ಲಿ ಕೆಲಸ ಮಾಡಿದೆವಾರಿದ್ದೇನೆ ವಿಧಾನ ಸಭೆಯ ಚುನಾವಣೆಯಲ್ಲಿ ನೀಡಿದ ಸಮೀಕ್ಷೆಗಳು ಕಾಂಗ್ರೆಸ್ 70 ಸ್ಥಾನ ಬರುವುದಿಲ್ಲ ಎಂದಿದ್ದವು ಆದರೆ ಮತದಾರ 136 ಸ್ಥಾನಗಳನ್ನು ನೀಡಿದ ಈ ಹಿನ್ನಲೆಯಲ್ಲಿ ಸಮೀಕ್ಷೆಗಳ ನಂಬುವ ಹಾಗಿಲ್ಲ ನಾಳೇಯ ಈ ವೇಳೇಗೆ ಚುನಾವಣೆಯ ಫಲಿತಾಂಶ ಬಂದಿರುತ್ತದೆ 16ಕ್ಕಿಂತ ಹೆಚ್ಚು ಸ್ಥಾನವನ್ನು ನಾವು ಗೆದಿರುತ್ತೇವೆ. ವಾಲ್ಮೀಕಿ ನಿಗಮದ ಪ್ರಕರಣವನ್ನು ಒಬ್ಬ ಸಚಿವನಾಗಿ ತಿಳಿಯಲು ಸಾಧ್ಯವಿಲ್ಲ ಅದು ಆಧಿಕಾರಿಗಳ ಮಟ್ಟದಲ್ಲಿ ಅಗಿದೆ ಇದರ ತನಿಖೆಗೆ ಎಸ್.ಐ.ಟಿ ನಿರ್ಮಾಣವಾಗಿದೆ. ತಪ್ಪು ಮಾಡಿದವರು ಸಿಗೇ ಬೀಳುತ್ತಾರೆ. ರಾಜ್ಯದ ಜನತೆ ಕಾಂಗ್ರೆಸ್ ಪಕ್ಷದಲ್ಲಿ ಬದ್ದತೆ ಮುಖಂಡರಲ್ಲಿ ಇರುವ ನೈತಿಕತೆ ನೋಡಿ ಮತವನ್ನು ನೀಡಿದ್ದಾರೆ. ಗ್ಯಾರೆಂಟಿಯನ್ನು ಜಾರಿ ಮಾಡಿದ್ದೇವೆ, 2014ರಲ್ಲಿ ಬಿಜೆಪಿ ಪಕ್ಷ ಕೇಂದ್ರದಲ್ಲಿ ಚುನಾವಣೆ ಸಮಯದಲ್ಲಿ 15 ಲಕ್ಷ ಮತ್ತು 2 ಕೋಟಿ ಉದ್ಯೋಗ ಎಂದು ಹೇಳಿತ್ತು ಆದರೆ ಇದುವರೆವಿಗೂ ಸಹಾ ಒಂದು ಉದ್ಯೋಗವನ್ನು ಸಹಾ ನೀಡಲ್ಲ ನಮ್ಮ ಯುವ ಜನತೆ ಉದ್ಯೋಗಕ್ಕಾಗಿ ಬೀದಿ ಬೀದಿ ಅಲೆಯುತ್ತಿದ್ದಾರೆ. ಇನ್ನೂ 15 ಲಕ್ಷ ಯಾರ ಅಕೌಂಟಿಗೂ ಸಹಾ ಬಂದಿಲ್ಲ,

ಆಗ್ನೇಯ ಶಿಕ್ಷಕರ ಚುನಾವಣೆಯಲ್ಲಿ ಜಿಲ್ಲೆ ಸೇರಿಕೊಂಡು ಎಲ್ಲಾ ಕಡೆಯಲ್ಲಿಯೂ ಸಹಾ ಉತ್ತಮವಾದ ಪ್ರತಿಕ್ರಿಯೇ ಸಿಕ್ಕಿದೆ. ಜಿಲ್ಲೆಯಲ್ಲಿ ಆರು ತಾಲ್ಲೂಕುಗಳಲ್ಲಿಯೂ ಸಹಾ ಬಹುತೇಕ ಮುಕ್ಕಾಲು ಭಾಗದ ಮೇಲೆ ಶಿಕ್ಷಕ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಆರ್ಶೀವಾದವನ್ನು ಮಾಡಿದ್ದಾರೆ. ಎನ್ನುವುದು ಮತದಾರರನ್ನು ಮಾತನಾಡಿಸಿದಾಗ ತಿಳಿದು ಬಂದಿದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T